ಸಂಪುಟ : 10 ಸಂಚಿಕೆ: 285 ಪುಟ : 4+2 ಬೆಲೆ: 3.00 ಶನಿವಾರ ಡಿಸೆಂಬರ್ 27 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 285 Pages : 4+2 Price : 3.00 Saturday December 27 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಪುಸ್ತಕ ಬಿಡುಗಡೆ ಕಾರ್ಯಕ್ರಮ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಡಿ. 27ರಂದು ಸಂಜೆ 6.30ಕ್ಕೆ ಗದುಗಿನ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನ, ಕಸಾಪ ಕಾರ್ಯಾಲಯದಲ್ಲಿ ಡಾ. ರಾಜಶೇಖರ ದಾನರಡ್ಡಿ ಅವರು ರಚಿಸಿದ 'ಅನುಭಾವ ಸಾಹಿತ್ಯ ಸಿಂಚನ' ಲೇಖನಗಳ ಸಂಕಲನ ಲೋಕಾರ್ಪಣಾ ಸಮಾರಂಭ ಜರುಗಲಿದೆ.

ಪುಸ್ತಕವನ್ನು ನರಗುಂದದ ಶ್ರೀ ಸಿದ್ಧೇಶ್ವರ ಪದವಿ ಮಹಾವಿದ್ಯಾಲಯದ ಕನ್ನಡ ಪ್ರಾಧ್ಯಾಪಕ ಡಾ. ಎಸ್.ವಿ. ಮನಗುಂಡಿ ಲೋಕಾರ್ಪಣೆಗೊಳಿಸುವರು. ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಪುಸ್ತಕ ಪರಿಚಯವನ್ನು ಸರಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಪ್ರೊ. ಎಸ್.ಯು. ಸಜ್ಜನಶೆಟ್ಟರ ಮಾಡುವರು. ಕೃತಿಕಾರರಾದ ಡಾ. ರಾಜಶೇಖರ ದಾನರಡ್ಡಿ ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಸಾಹಿತಿಗಳು, ಪರಿಷತ್ತಿನ ಸದಸ್ಯರು ಭಾಗವಹಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೀದಿ ನಾಯಿ ದತ್ತು ಪಡೆಯಲು ಅವಕಾಶ



**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದ ಮೇರೆಗೆ ರೋಣ ಪುರಸಭೆ ವ್ಯಾಪ್ತಿಯಲ್ಲಿನ ಸಾರ್ವಜನಿಕ ಸಂಚಾರದ ವಲಯಗಳಲ್ಲಿನ, ಸರ್ಕಾರಿ ಮತ್ತು ಅರೆ ಸರ್ಕಾರಿ ಸಂಸ್ಥೆಗಳಲ್ಲಿರುವ ಬೀದಿ ನಾಯಿಗಳಿಗೆ ಚುಚ್ಚುಮದ್ದು ಹಾಕಿಸಿ, ಸಂತಾನ ಹರಣ ಶಸ್ತ್ರ ಚಿಕಿತ್ಸೆ ಕಾರ್ಯಕ್ರಮ ನಿರ್ವಹಿಸಲಾಗುತ್ತಿದೆ.

ಶಸ್ತ್ರ ಚಿಕಿತ್ಸೆ ಮಾಡಿದ ನಂತರ ಬೀದಿ ನಾಯಿಗಳನ್ನು ದತ್ತು ತೆಗೆದುಕೊಂಡು ಆಶ್ರಯತಾಣದಲ್ಲಿ ಪೋಷಣೆ ಮಾಡಲು ಆಸಕ್ತಿಯುಳ್ಳ/ಇಚ್ಛೆಯುಳ್ಳ ಸಾರ್ವಜನಿಕರು ಹಾಗೂ ಸಂಘ-ಸಂಸ್ಥೆಗಳು ಜನವರಿ 5ರೊಳಗಾಗಿ ಪುರಸಭೆಯಿಂದ ಅನುಮತಿ ಪಡೆದು ದತ್ತು ತೆಗೆದುಕೊಳ್ಳಲು ಪುರಸಭೆಯಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದೆ ಎಂದು ರೋಣ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದ ಮೇರೆಗೆ ಗಜೇಂದ್ರಗಡ ಪುರಸಭೆ ವ್ಯಾಪ್ತಿಯಲ್ಲಿನ ಸಾರ್ವಜನಿಕ ಸಂಚಾರದ ವಲಯಗಳಲ್ಲಿನ, ಸರ್ಕಾರಿ ಮತ್ತು ಅರೆ ಸರ್ಕಾರಿ ಸಂಸ್ಥೆಗಳಲ್ಲಿರುವ ಬೀದಿನಾಯಿಗಳಿಗೆ ಚುಚ್ಚುಮದ್ದು ಹಾಕಿಸಿ, ಸಂತಾನ ಹರಣ ಶಸ್ತ್ರ ಚಿಕಿತ್ಸೆ ಕಾರ್ಯಕ್ರಮ ನಿರ್ವಹಿಸಲಾಗುತ್ತಿದೆ.

ಶಸ್ತ್ರಚಿಕಿತ್ಸೆ ಮಾಡಿದ ನಂತರ ಬೀದಿನಾಯಿಗಳನ್ನು ದತ್ತು ತೆಗೆದುಗೊಂಡು ಆಶ್ರಯ ತಾಣದಲ್ಲಿ ಪೋಷಣೆ ಮಾಡಲು ಆಸಕ್ತಿಯುಳ್ಳ/ಇಚ್ಛೆಯುಳ್ಳ ಸಾರ್ವಜನಿಕರು ಹಾಗೂ ಸಂಘ-ಸಂಸ್ಥೆಗಳು ಜನವರಿ 5ರೊಳಗಾಗಿ ಪುರಸಭೆಯಿಂದ ಅನುಮತಿ ಪಡೆದು ದತ್ತು ತೆಗೆದುಕೊಳ್ಳಲು ಪುರಸಭೆಯಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದೆ ಎಂದು ಗಜೇಂದ್ರಗಡ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಾಮನೂರು ಶಿವಶಂಕರಪ್ಪನವರ ನುಡಿನಮನ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ

# ಶಾಮನೂರು ಜಾತ್ಯಾತೀತ, ಜನಪ್ರಿಯ ನಾಯಕ

**■ವಿಜಯಸಾಕ್ಷಿ ಸುದ್ದಿ, ದಾವಣಗೆರೆ**

ಜಾತ್ಯಾತೀತ ಹಾಗೂ ಜನಪ್ರಿಯ ನಾಯಕರೆನಿಸಿದ್ದ ಶಾಮನೂರು ಶಿವಶಂಕರಪ್ಪನವರ ನಿಧನದಿಂದ ನಾಡಿಗೆ ಮತ್ತು ಪಕ್ಷಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಅವರು ಶುಕ್ರವಾರ ಮಾಜಿ ಸಚಿವ ದಿ. ಶಾಮನೂರು ಶಿವಶಂಕರಪ್ಪ ಅವರ ನುಡಿನಮನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಶಾಮನೂರು ಶಿವಶಂಕರಪ್ಪ ಅವರು ದೇಶ ಕಂಡ ಹಿರಿಯ ಶಾಸಕ, ಮಾಜಿ ಮಂತ್ರಿ ಹಾಗೂ ದಾವಣಗೆರೆಯ ನಗರಸಭೆ ಅಧ್ಯಕ್ಷರಾಗಿದ್ದರು. ಕಾಂಗ್ರೆಸ್ ಪಕ್ಷದಲ್ಲಿ ಖಜಾಂಚಿಯಾಗಿ ಸುದೀರ್ಘ ಸೇವೆ ಸಲ್ಲಿಸಿದ್ದರು. ಇತ್ತೀಚೆಗೆ ಅವರ ಜನ್ಮದಿನಾಚರಣೆಯಲ್ಲಿ ಹಾಗೂ ದಾಲ್ ಮಿಲ್ ಉದ್ಘಾಟನೆಯಲ್ಲಿ



ಪಾಲ್ಗೊಂಡಿದ್ದು, ಶ್ರೀಯುತರು ಶತಾಯುಷಿಗಳಾಗುತ್ತಾರೆ ಎಂಬ ನಂಬಿಕೆಯಿತ್ತು. ಅವರ ಅಗಲಿಕೆಯಿಂದ ನಾಡಿಗೆ ಮತ್ತು ಕಾಂಗ್ರೆಸ್ ಪಕ್ಷಕ್ಕೆ ತುಂಬಲಾರದ ನಷ್ಟವುಂಟಾಗಿದೆ. ಅವರು ತಮ್ಮ ಇಳಿವಯಸ್ಸಿನಲ್ಲಿಯೂ ಅತ್ಯಂತ ಕ್ರಿಯಾಶೀಲರಾಗಿದ್ದರು ಎಂದರು.

ಅವರು ವೀರಶೈವ ಮಹಾಸಭಾದ ರಾಷ್ಟ್ರಾಧ್ಯಕ್ಷರಾಗಿದ್ದ ಸಂದರ್ಭದಲ್ಲಿ ಸನ್ಮಾನ ಕಾರ್ಯಕ್ರಮದಲ್ಲಿ ನಾನೂ ಭಾಗವಹಿಸಿದ್ದೆ ಎಂದರಲ್ಲದೆ, ಬಿಜಾಪುರದ ಅಕ್ಕಮಹಾದೇವಿ ಮಹಿಳಾ ಕಾಲೇಜು ಹಾಗೂ ಸರ್ಕಾರಿ ಕಚೇರಿಗಳಲ್ಲಿ ಜಗದ್ಗುರು ಬಸವಣ್ಣನವರ ಛಾಯಾಚಿತ್ರ ಕಡ್ಡಾಯಗೊಳಿಸುವ ತೀರ್ಮಾನವನ್ನು ಅಭಿನಂದಿಸಲು ಸನ್ಮಾನ ಕಾರ್ಯಕ್ರಮವನ್ನು ಏರ್ಪಡಿಸಿದ್ದನ್ನು ಮುಖ್ಯಮಂತ್ರಿಗಳು ಸ್ಮರಿಸಿದರು.

ಅವರೊಬ್ಬ ಜಾತ್ಯಾತೀತ ಹಾಗೂ ಜನಪ್ರಿಯ ನಾಯಕ. ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಲಿಂಗಾಯತ ಸಮುದಾಯ ಪ್ರಬಲವಿಲ್ಲದಿದ್ದರೂ, ಆ ಕ್ಷೇತ್ರದಲ್ಲಿ ಜನಮನ್ನಣೆಗೆ ಪಾತ್ರರಾಗಿದ್ದರಲ್ಲದೇ ಸತತವಾಗಿ ಆರು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದರು. ಸದಾ ಚೈತನ್ಯಶೀಲರಾಗಿದ್ದ ಶಾಮನೂರು ಶಿವಶಂಕರಪ್ಪನವರು ಮುಂದಿನ ಚುನಾವಣೆಯಲ್ಲಿಯೂ ಭಾಗವಹಿಸುವ ಹುರುಪನ್ನು ತೇ-ೂರಿದ್ದರು. ಎಲ್ಲ ರಾಜಕೀಯ ಪಕ್ಷದವರೊಂದಿಗೂ ಉತ್ತಮ ಬಾಂಧವ್ಯ ಹೊಂದಿದ್ದ ಅಜಾತಶತ್ರುವಾಗಿದ್ದರು ಎಂದರು.

ಬಡವರು, ಕಷ್ಟದಲ್ಲಿರುವವರಿಗೆ ಸಹಾಯಹಸ್ತ ಚಾಚಲು ಟ್ರಸ್ಟ್ ಮೂಲಕ ನೆರವಾಗುವ ಕೊಡುಗೈ ದಾನಿಯಾಗಿದ್ದರು. ಪ್ರತಿಯೊಬ್ಬರಿಗೂ ಹುಟ್ಟು ಆಕಸ್ಮಿಕ, ಆದರೆ ಸಾವು ಖಚಿತ, ಈ ನಡುವಿನ ಪಯಣದಲ್ಲಿ ಬದುಕಿನ ಸಾರ್ಥಕತೆ ಕಂಡುಕೊಳ್ಳುವುದು ಮುಖ್ಯ. ದುಃಖದಲ್ಲಿರುವವರಿಗೆ ಸದಾ ನೆರವಾಗುವ ಅವರ ಬದುಕು ನಿಜಕ್ಕೂ ಸಾರ್ಥಕ ಎಂದರು.

ಕೇವಲ ಜವಳಿ ಕೇಂದ್ರವಾಗಿದ್ದ ದಾವಣಗೆರೆಯನ್ನು ವಿದ್ಯಾಕಾಶಿ ಮಾಡಿದ ಕೀರ್ತಿ ಶ್ರೀಯುತರಿಗೆ ಸಲ್ಲುತ್ತದೆ. ಬಾಪೂಜಿ ವಿದ್ಯಾಸಂಸ್ಥೆಯನ್ನು ಸ್ಥಾಪಿಸಿ ಸಹಸ್ರಾರು ಜನರ ಬದುಕಿಗೆ ದಾರಿದೀಪವಾಗಿದ್ದರು. ಉದ್ಯಮಿಯಾಗಿ, ಕೈಗಾರಿಕೋದ್ಯಮಿಯಾಗಿ, ವಿದ್ಯಾ ಸಂಸ್ಥೆಗಳ ಸಂಸ್ಥಾಪಕರಾಗಿ, ರಾಜಕಾರಣಿಯಾಗಿ ಸುದೀರ್ಘ ಸೇವೆ ಸಲ್ಲಿಸಿರುವ ಶಾಮನೂರು ಅವರ ಕಾರ್ಯ ಶ್ಲಾಘನೀಯ. ಮಹಾನ್ ಚೇತನ ಶಾಮನೂರು ಶಿವಶಂಕರಪ್ಪನವರ ಆತ್ಮಕ್ಕೆ ಶಾಂತಿ ದೊರೆಯಲಿ ಹಾಗೂ ಅವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿ ಅವರ ಕುಟುಂಬವರ್ಗ ಹಾಗೂ ಅಭಿಮಾನಿವರ್ಗಕ್ಕೆ ದೊರೆಯಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುವುದಾಗಿ ಮುಖ್ಯಮಂತ್ರಿಗಳು ತಿಳಿಸಿದರು.

### ಬಲ್ಡೋಟಾ ಕಾರ್ಖಾನೆ ವಿರೋಧಿ 57ನೇ ದಿನದ ಹೋರಾಟದಲ್ಲಿ ಭೂಮಿ, ಪರಿಸರ ರಕ್ಷಣೆಯ ಹಾಡು

# ಪರಿಸರ ಉಳಿಯದಿದ್ದರೆ ನಮಗೂ ಉಳಿಗಾಲವಿಲ್ಲ




**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ಇದರ ಜಂಟಿ ಕ್ರಿಯಾ ವೇದಿಕೆ ನಡೆಸಿರುವ ಬಲ್ಡೋಟಾ (ಬಿಎಸ್ಪಿಎಲ್), ಕಿರ್ಲೋಸ್ಕರ್, ಕಲ್ಯಾಣಿ ಸ್ಟೀಲ್, ಮುಕುಂದ-ಸುಮಿ, ಎಕ್ಸ್ ಇಂಡಿಯಾ, ವನ್ಯಾ, ಹರೇಕೃಷ್ಣ ಮುಂತಾದ ಕಾರ್ಖಾನೆಗಳ ವಿಸ್ತರಣೆ ವಿರೋಧಿಸಿ, ಬಸಾಪುರ ಕೆರೆ ಸಾರ್ವಜನಿಕರಿಗೆ ಬಳಸಲು ಮುಕ್ತಗೊಳಿಸಬೇಕು ಎಂದು ಆಗ್ರಹಿಸಿ, ತುಂಗಭದ್ರಾ ನೀರು ವಿಷಗೊಳಿಸುವ ಕಾರ್ಖಾನೆಗಳನ್ನು ಸೀಜ್ ಮಾಡಲು ಒತ್ತಾಯಿಸಿ, ಮುಖ್ಯಮಂತ್ರಿಗಳು, ಕೈಗಾರಿಕಾ ಮಂತ್ರಿ ಎಂ.ಬಿ. ಪಾಟೀಲ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ, ಶಾಸಕ ರಾಘವೇಂದ್ರ ಹಿಟ್ನಾಳ ಅವರು ಕಾರ್ಖಾನೆ ಬಾಧಿತ ಹಳ್ಳಿಗೆ ಖುದ್ದು ಭೇಟಿ ನೀಡಿ ಅಲ್ಲಿನ ಜನರ ಅಹವಾಲು ಆಲಿಸಬೇಕೆಂದು ಅನಿರ್ಧಿಷ್ಟ ಧರಣಿ ನಡೆಸಿ ಒತ್ತಾಯಿಸಿದರು.

57ನೇ ದಿನದ ಧರಣಿಯಲ್ಲಿ ಪರಿಸರ ಕವಿ ಗಂಗಾಧರ ಖಾನಾಪೂರ ತಮ್ಮ ಪರಿಸರ ಕಾಳಜಿಯ ಕವನ ವಾಚಿಸಿ ಮಾತನಾಡಿ, ನಮಗೆ ಜೀವ ಕೊಡಲು ಆಧಾರವಾದದ್ದು ಈ ಪರಿಸರ. ಪರಿಸರ ಉಳಿಯದಿದ್ದರೆ ಯಾವ ಜೀವವೂ ಬದುಕುಳಿಯುವುದಿಲ್ಲ. ಇದು ಗೊತ್ತಿದ್ದೂ ಸರ್ಕಾರ ಮತ್ತು ಕಂಪನಿಗಳು ಧನದಾಹದಿಂದ ಯಾವ ಜೀವದ ಕಾಳಜಿಯನ್ನು ಮಾಡಲಾರವು.

ನಮ್ಮ ಮುಂದಿನ ಪೀಳಿಗೆ ಉಳಿಯಬೇಕಾದರೆ ನಮಗೆ ಎಷ್ಟೇ ಕಷ್ಟವಾದರೂ ಹಿಂಜರಿಯುವ ಮಾತೇ ಇಲ್ಲ. ಮುಂದೆ ಸಾಗಿ ಗಂಭೀರ ಹೆಜ್ಜೆ ಇಡೋಣ ಎಂದರು.

ಧರಣಿಯಲ್ಲಿ ನಿವೃತ್ತ ಪ್ರಾಚಾರ್ಯ ಎಸ್.ಬಿ. ರಾಜೂರು, ಮಲ್ಲಿಕಾರ್ಜುನ ಬಿ. ಗೋನಾಳ, ಶಂಭುಲಿಂಗಪ್ಪ ಹರಗೇರಿ, ಕೃಷಿ ಬೆಲೆ ಆಯೋಗದ ಸದಸ್ಯ ಡಿ.ಎಚ್. ಪೂಜಾರ, ಮಂಜುನಾಥ ಜಿ. ಗೊಂಡಬಾಳ, ಈರಯ್ಯ ಸ್ವಾಮಿ, ವೀರೇಶ ಎಂ.ಭಾಗೂರು, ರಮೇಶ ಪಿ.ಬಿ, ಮಖ್ಬುಲ್ ರಾಯಚೂರು, ಖ್ಯಾತ ಗಾಯಕ ಸದಾಶಿವ ಪಾಟೀಲ, ರವಿ ಕಾಂತನವರ, ಬಸವರಾಜ ನರೇಗಲ್, ಭೀಮಪ್ಪ ಯಲಬುರ್ಗಾ, ವೀರೇಶ ಎ.ವಿ. ಮುಂತಾದವರು ಪಾಲ್ಗೊಂಡಿದ್ದರು.

ಕವಯಿತ್ರಿ ಪುಷ್ಪಲತಾ ಏಳುಭಾವಿ ಅವರು ತಮ್ಮ ಪರಿಸರ ಕಾಳಜಿಯ, ಭೂಮಿ, ಕೃಷಿ ರಕ್ಷಣೆಯ ಸ್ವರಚಿತ ಕವನ ವಾಚನ ಮಾಡಿದರು.

ಮಹಾದೇವಪ್ಪ ಎಸ್.ಮಾವಿನಮಡು ಪರಿಸರ ಸಂರಕ್ಷಣೆ, ಜಾಗೃತಿ ಹಾಡುಗಳನ್ನು ಕೊಳಲು ವಾದನ ನುಡಿಸಿ ಹಾಡಿದರು. ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು ಅವರು 'ಕಾರ್ಖಾನೆ ಬಾಧಿತರೆ ಹೋರಾಟ ಮಾಡಿರೋ' ಎನ್ನುವ ಕವನ ರಚಿಸಿ ವಾಚನ ಮಾಡಿದರು.

### ಜಿಲ್ಲಾಡಳಿತದಿಂದ ರಾಷ್ಟ್ರಕವಿ ಕುವೆಂಪು ಜನ್ಮದಿನ ಆಚರಣೆ

# ವಿಶ್ವ ಮಾನವ ದಿನಾಚರಣೆ ಡಿ. 29ಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗದಗ ಇವರ ಸಹಯೋಗದಲ್ಲಿ ರಾಷ್ಟ್ರಕವಿ ಕುವೆಂಪು ಜನ್ಮದಿನದ ನಿಮಿತ್ತ ವಿಶ್ವ ಮಾನವ ದಿನಾಚರಣೆ-2025 ಕಾರ್ಯಕ್ರಮವನ್ನು ಡಿಸೆಂಬರ್ 29ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ ಎಸ್. ತಂಗಡಗಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ, ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಆಗಮಿಸುವರು.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸರ್ವರಿಗೂ ಸ್ವಾಗತ ಕೋರಿದ್ದಾರೆ.

ವಿಶೇಷ ಆಹ್ವಾನಿತರಾಗಿ ಕರ್ನಾಟಕ ಯೋಜನೆ ಕಾರ್ಯಕ್ರಮ ಸಂಯೋಜನೆ ಮತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ ಆಗಮಿಸಲಿದ್ದಾರೆ. ಹಿರಿಯ ಸಾಹಿತಿ ಚಂದ್ರಶೇಖರ ವಸ್ತ್ರದ ಉಪನ್ಯಾಸ ನೀಡಲಿದ್ದಾರೆ.

## ಮಹಿಳಾ ಸ್ವ-ಸಹಾಯ ಸಂಘಗಳಿಂದ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಕೇಂದ್ರ ಪುರಸ್ಕೃತ ಅಮೃತ-2.0 ಅಭಿಯಾನದ 'ಅಮೃತ್ ಮಿತ್ರ' ಕಾರ್ಯಕ್ರಮದ ತಾಂತ್ರಿಕೇತರ ಚಟುವಟಿಕೆಯ ಕಾರ್ಯಕ್ರಮದಡಿ ಮುಂಡರಗಿ ಪುರಸಭೆ ವ್ಯಾಪ್ತಿಯಲ್ಲಿನ ನೀರಿನ ಗುಣಮಟ್ಟ ಪರೀಕ್ಷೆ ಹಾಗೂ ಜಲ ಶುದ್ಧೀಕರಣ ಘಟಕದ ಸೌಂದರ್ಯಕರಣ ನಿರ್ವಹಣೆ ಮಾಡಲು ಡೇ-ನಲ್ಮ್ ಅಭಿಯಾನದಡಿ ಅರ್ಹ ಮಹಿಳಾ ಸ್ವ-ಸಹಾಯ ಸಂಘಗಳಿಂದ ಆಸಕ್ತಿಪಡಿಸುವಿಕೆ ಆಹ್ವಾನಿಸಲಾಗಿದೆ.

ಅಮೃತ್-2.0 ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ರಾಜ್ಯದಲ್ಲಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯ ಮುಖ್ಯ ಉದ್ದೇಶ ನಗರ ಪ್ರದೇಶಗಳಿಗೆ ಸುಸ್ಥಿರ ಮತ್ತು ಶುದ್ಧ ನೀರು ಪೂರೈಕೆ ಮತ್ತು ನಿರ್ವಹಣೆ ಮಾಡುವುದಾಗಿದೆ.

ಸದರಿ ಕಾರ್ಯಕ್ರಮದ ಮುಖ್ಯ ಉದ್ದೇಶ ಅಮೃತ್-2.0 ಅಭಿಯಾನದಡಿಯ ತಾಂತ್ರಿಕೇತರ ಚಟುವಟಿಕೆಗಳನ್ನು ಕೇಂದ್ರ ಪುರಸ್ಕೃತ ಯೋಜನೆಯಾದ ಡೇ-ನಲ್ಮ್ ಅಭಿಯಾನದಡಿ ಮುಂಡರಗಿ ಪುರಸಭೆ ವ್ಯಾಪ್ತಿಯಲ್ಲಿ ರಚಿಸಲಾಗಿರುವ ಮಹಿಳಾ ಸ್ವ-ಸಹಾಯ ಸಂಘಗಳ ಮೂಲಕ ಸದರಿ ಚಟುವಟಿಕೆಗಳನ್ನು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅನುಷ್ಠಾನಗೊಳಿಸಲು ಆಸಕ್ತಿ ಇರುವ ಮಹಿಳಾ ಸ್ವ-ಸಹಾಯ ಸಂಘಗಳಿಂದ ಭಾಗವಹಿಸಬಹುದಾಗಿದೆ. ಆಸಕ್ತಿ ಹೊಂದಿದ ಮಹಿಳಾ ಸ್ವ-ಸಹಾಯ ಸಂಘವು ಜನವರಿ 15ರೊಳಗಾಗಿ ಮುಂಡರಗಿ ಪುರಸಭೆ ಕಾರ್ಯಾಲಯದಿಂದ ಅರ್ಜಿ ನಮೂನೆಯನ್ನು ಪಡೆದು ಅರ್ಹ ಮತ್ತು ಆಸಕ್ತಿ ಇರುವ ಮಹಿಳಾ ಸ್ವ-ಸಹಾಯ ಸಂಘಗಳು ತಮ್ಮ ಪ್ರಸ್ತಾವನೆಯನ್ನು ಮುಚ್ಚಿದ ಲಕೋಟೆಯಲ್ಲಿ ಮುಂಡರಗಿ ಪುರಸಭೆ ಕಾರ್ಯಾಲಯಕ್ಕೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮುಂಡರಗಿ ಪುರಸಭೆ ಡೇ-ನಲ್ಮ್ ವಿಭಾಗವನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಸಿ.ಸಿ ಚರಂಡಿ ಕಾಮಗಾರಿಗೆ ಭೂಮಿಪೂಜೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಪಂಚವಟಿ ನಾಗರಕಟ್ಟಿ ಸಮೀಪ ಗದಗ-ಬೆಟಗೇರಿ ನಗರಸಭೆ ವಾರ್ಡ್ ನಂ. 34ರಲ್ಲಿ ಸಿ.ಸಿ ಚರಂಡಿ ನಿರ್ಮಾಣ ಕಾಮಗಾರಿಗೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಭೂಮಿಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಗದಗ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ನಗರಸಭಾ ಸದಸ್ಯೆ ವಿದ್ಯಾವತಿ ಗಡಗಿ ಸೇರಿದಂತೆ ಗಣ್ಯರು, ಹಿರಿಯರು ಹಾಜರಿದ್ದರು.

# ಡಂಬಳದಲ್ಲಿ ಹಿಂದೂ ಸಮ್ಮೇಳನ ನಾಳೆ



**■ವಿಜಯಸಾಕ್ಷಿ ಸುದ್ದಿ, ಡಂಬಳ**

ಡಿ. 28ರಂದು ಸಂಜೆ 6 ಗಂಟೆಗೆ ಡಂಬಳ ಗ್ರಾಮದ ಶ್ರೀ ಜಗದ್ಗುರು ತೋಂಟದಾರ್ಯ ಕಲಾ ಭವನದಲ್ಲಿ ಹಿಂದೂ ಸಮ್ಮೇಳನ ಸಂಚಾಲಾನಾ ಸಮಿತಿ ವತಿಯಿಂದ 'ಹಿಂದೂ ಸಮ್ಮೇಳನ' ನಡೆಯಲಿದೆ ಎಂದು ಹಿಂದೂ ಸಮ್ಮೇಳನ ಸಂಚಾಲನಾ ಸಮಿತಿ ಡಂಬಳ ಹೋಬಳಿ ಅಧ್ಯಕ್ಷ ಮಲ್ಲೇಶ ಗವಿಸಿದ್ದಪ್ಪ ಮಠದ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕಾರ್ಯಕ್ರಮದ ಸಾನ್ನಿಧ್ಯವನ್ನು ಹರ್ಲಾಪೂರ ಹಠಯೋಗಿ ಶ್ರೀಗುರು ಕೊಟ್ಟೂರೇಶ್ವರ ಮಠದ ಶ್ರೀ. ಮ.ನಿ.ಪ್ರ ಡಾ.ಅಭಿನವ ಕೊಟ್ಟೂರೇಶ್ವರ ಮಹಾಸ್ವಾಮಿಗಳು ವಹಿಸುವರು. ದಿಕ್ಸೂಚಿ ಭಾಷಣಕಾರರಾಗಿ ಹಿಂದೂ ಜಾಗರಣ ವೇದಿಕೆ ಕ್ಷೇತ್ರೀಯ ಸಂಯೋಜಕರಾದ ಜಗದೀಶ ಕಾರಂತ ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಸಮಿತಿ ಪ್ರಮುಖರಾದ ಬೀರಪ್ಪ ಬಂಡಿ, ವೆಂಕನಗೌಡ ಪಾಟೀಲ, ಮುದ್ಲಿಂಗಪ್ಪ ಕೊರ್ಲಹಳ್ಳಿ, ಉಪಾಧ್ಯಕ್ಷರಾದ ಹನುಮಪ್ಪ ಹಾದಿಮನಿ, ಬಾಬು ಚನ್ನಪ್ಪ ರಾಠೋಡ, ಡಿ. ಪ್ರಸಾದ, ರವಿ ಕರಿಗಾರ, ನಾಗರಾಜ ಕಾಟ್ರಳ್ಳಿ, ಈಶ್ವರಗೌಡ ಪಾಟೀಲ, ಕಾರ್ಯದರ್ಶಿ ಮಂಜುನಾಥ ಇಟಗಿ, ಸದಸ್ಯರಾದ ಈಶಪ್ಪ ರಂಗಪ್ಪನವರ, ಮುತ್ತನಗೌಡ ಚಿನ್ನಪ್ಪಗೌಡ್ರ, ಲಕ್ಷ್ಮಣ ಬೂದಿಹಾಳ, ಪುಂಡಲೀಕ ಪಾರಪ್ಪನವರ ಸೇರಿದಂತೆ ಸಮಿತಿ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ. ಮಧ್ಯಾಹ್ನ 4 ಗಂಟೆಗೆ ಗ್ರಾಮದ ಶ್ರೀ ಮಾರುತಿ ದೇವಸ್ಥಾನದಿಂದ ಭವ್ಯ ಶೋಭಾಯಾತ್ರೆ ಹೊರಡಲಿದೆ ಎಂದು ತಿಳಿಸಿದ್ದಾರೆ.

**ಗದಗ-ಬೆಟಗೇರಿ ಇನ್ನರ್ ವ್ಹೀಲ್ ಕ್ಲಬ್‌ಗೆ ಜಿಲ್ಲಾ ಚೇರಮನ್ ಉತ್ಕರ್ಷಾ ಪಾಟೀಲರ ಅಧಿಕೃತ ಭೇಟಿಯ ನಿಮಿತ್ತ ಲೇಖನ**

# ಯಶಸ್ಸಿನ ಮೇರು ಶಿಖರ ಉತ್ಕರ್ಷಾ ಪಾಟೀಲ

ಉತ್ಕರ್ಷಾ ಸಂಗ್ರಾಮ್ ಪಾಟೀಲ್ ಇನ್ನರ್ ವ್ಹೀಲ್ ಕ್ಲಬ್ 317ರ ಜಿಲ್ಲಾ ಚೇರಮನ್ ಆಗಿದ್ದು, ಇವರು ತಾಯಿಯ ಪ್ರೀತಿ, ಮಮತೆ, ವಾತ್ಸಲ್ಯ ಮತ್ತು ಶಿಸ್ತುಬದ್ಧ ಜೀವನದ ಅಡಿಪಾಯದಲ್ಲಿ ಬೆಳೆದು ಉನ್ನತ ಸ್ಥಾನವನ್ನು ಗಳಿಸಿದ್ದಾರೆ. ಐದು ವರ್ಷದವರಿದ್ದಾಗಲೇ ತಂದೆಯನ್ನು ಕಳೆದುಕೊಂಡು ತಾಯಿ ವಿಜಯಮಾಲಾ ರಾಮರಾವ್ ಹಲಗೇಕರ ಅವರ ಆರೈಕೆಯಲ್ಲಿ ಬೆಳೆದಿದ್ದಾರೆ. ಕೊಲ್ಲಾಪುರದಲ್ಲಿ ಹುಟ್ಟಿ ಬೆಳಗಾವಿಯಲ್ಲಿ ಬೆಳೆದ ಇವರು, ಸೇಂಟ್ ಜೋಸೆಫ್ ಕಾಲ್ಮೆಂಟ್‌ನಲ್ಲಿ ಶಿಕ್ಷಣವನ್ನು ಪಡೆದು, ಮರಾಠ ಮಂಡಲ ಪಾಲಿಟೆಕ್ನಿಕ್ ಕಾಲೇಜಿನಿಂದ ಎಲೆಕ್ಟ್ರಾನಿಕ್ ಮತ್ತು ದೂರ ಸಂಪರ್ಕ ಇಂಜಿನಿಯರಿಂಗ್‌ನಲ್ಲಿ ಡಿಪ್ಲೋಮಾ ಪದವಿಯನ್ನು ಪಡೆದಿದ್ದಾರೆ.

ಬಾಲ್ಯದಿಂದಲೇ ಉತ್ತಮ ಕ್ರೀಡಾಪಟುವಾಗಿದ್ದು, ಶಾರ್ಟ್ ಪುಟ್, ಡಿಸ್ಕಸ್ ಥ್ರೋ, ಜಾವೆಲಿನ್ ಥ್ರೋ ಮುಂತಾದ ಆಟಗಳಲ್ಲಿ ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಶಸ್ತಿಗಳನ್ನು ಪಡೆದಿದ್ದಾರೆ. ನಿರಂತರವಾಗಿ ಮೂರು ವರ್ಷಗಳ ಕಾಲ ಫುಟ್ಬಾಲ್ ಹಾಗೂ ಥ್ರೋ ಬಾಲ್ ತಂಡದ ನಾಯಕಿಯಾಗಿದ್ದು, ಬಾಲ್ಯದಿಂದಲೇ ಉತ್ಸಾಹಭರಿತವಾದ ಮತ್ತು ಕ್ರಿಯಾಶೀಲ ಬದುಕನ್ನು ಕಳೆದಿದ್ದಾರೆ.

ಪ್ರಸ್ತುತ ಮಾರ್ವಲಸ್ ಗ್ರೂಪ್ ಆಫ್ ಕಂಪೆನಿಗಳ ಮುಖ್ಯ ಪ್ರವರ್ತಕರಲ್ಲಿ ಒಬ್ಬರಾಗಿದ್ದು, ಮಾನವ ಸಂಪನ್ಮೂಲ ಮತ್ತು ಆಡಳಿತ ನಿರ್ದೇಶಕಿಯಾಗಿ ಗುಂಪನ್ನು ಮುನ್ನಡೆಸುತ್ತಿದ್ದಾರೆ. ಉತ್ಕರ್ಷಾ ಸಂಗ್ರಾಮ್ ಪಾಟೀಲ್ ಅವರ ಶಿಸ್ತುಬದ್ಧ ಬೆಂಬಲದೊಂದಿಗೆ ಮಾರ್ವೆಲಸ್ ಗ್ರೂಪ್ ಈಗ ಶ್ರೇಷ್ಠತೆ ಮತ್ತು ಯಶಸ್ಸಿನ ಹೊಸ ಶಿಖರವನ್ನು ತಲುಪಿದೆ.

2002ರಲ್ಲಿ ಇನ್ನರ್ ವ್ಹೀಲ್ ಕ್ಲಬ್‌ನ್ನು ಪ್ರವೇಶಿಸಿದ ಇವರು, 2016-17ರಲ್ಲಿ ಕೊಲ್ಲಾಪುರ್ ಇನ್ನರ್ ವ್ಹೀಲ್ ಕ್ಲಬ್‌ನ ಅಧ್ಯಕ್ಷರಾಗಿ ಅಧಿಕಾರವನ್ನು ಸ್ವೀಕರಿಸಿದರು. ಈ ಅವಧಿಯಲ್ಲಿ ಅವರು ಅನೇಕ ಪ್ರಶಸ್ತಿಗಳನ್ನು ಪಡೆದಿದ್ದು, ಅವುಗಳಲ್ಲಿ ಹ್ಯಾಪಿ ಸ್ಕೂಲ್ ಯೋಜನೆ ತುಂಬಾ ಮೆಚ್ಚುಗೆಯನ್ನು ಪಡೆದಿದೆ. 2017-18ರಲ್ಲಿ ಜಿಲ್ಲಾ ವಲಯದ ಸಾಕ್ಷರತಾ ಕ್ಲಬ್ ಸಂಯೋಜಕರಾಗಿದ್ದ ಇವರು ಜಿಲ್ಲಾ ಸಂಪಾದಕಿಯಾಗಿ ಕರೋನಾ ಸಮಯದಲ್ಲಿ ಕೈಗೊಂಡ ಕಾರ್ಯಗಳು, ಜಿಲ್ಲಾ ಆಯ್‌ಎಸ್‌ಓ ಆದಾಗ ಮಕ್ಕಳು ಮತ್ತು ಮಾನಸಿಕ



ಅಸ್ವಸ್ಥ ಮಹಿಳೆಯರಿಗಾಗಿ ಕೈಗೊಂಡ ಕಾರ್ಯಗಳು, ಕೊಲ್ಲಾಪುರದ ಜಿಲ್ಲಾ ಸಮ್ಮೇಳನದ ಅಂಗವಾಗಿ ಜಿಲ್ಲಾ ಆಸ್ಪತ್ರೆಗೆ ಇ- ಅಂಬ್ಯುಲೆನ್ಸ್ ನೀಡಿದ್ದು, ಜಿಲ್ಲಾ ಇಎಸ್‌ಓ ಆದಾಗ ಜೈಪುರ ಪಾದಯಾತ್ರೆ ಯೋಜನೆಗೆ 1 ಲಕ್ಷ ರೂ ನೀಡಿದ್ದು, ಜಿಲ್ಲಾ ಉಪಾಧ್ಯಕ್ಷರಾದಾಗ 25 ವ್ಹೀಲ್ ಚೇರ್‌ಗಳನ್ನು ನೀಡಿದ್ದು ಹೀಗೆ ಇವರು ಕೈಗೊಂಡ ಅನೇಕ ಕಾರ್ಯಗಳು ಶ್ಲಾಘನೀಯವಾಗಿವೆ.

ರೋಟರಿ ಇಂಟರ್‌ನ್ಯಾಷನಲ್ ಜಿಲ್ಲಾ 3170ಗೆ ಪ್ರವೇಶಿಸಿದ ಮೊದಲ ಮಹಿಳೆಯಾದ ಇವರು ಅಲ್ಲಿಯೂ ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇವರ ಸಾಧನೆ ಮತ್ತು ಕೆಲಸಗಳನ್ನು ಗುರುತಿಸಿ ಇವರಿಗೆ ಅನೇಕ ಪ್ರಶಸ್ತಿಗಳನ್ನು ನೀಡಿ ಗೌರವಿಸಿದ್ದಾರೆ. ಸಾಮಾಜಿಕ ಕೊಡುಗೆಗಳಿಗಾಗಿ ಸಿಎಸ್‌ಐಬಿಆರ್ ಮ್ಯಾನೇಜ್ಮೆಂಟ್ ಕಂಪನಿಯಿಂದ 'ಕಿಂಗ್ ಮೇಕರ್' ಪ್ರಶಸ್ತಿ, ಕೊಲ್ಲಾಪುರದ ಪ್ರೆಸ್ ಕೌನ್ಸಿಲ್‌ನಿಂದ 'ಸನ್ಮಾನ್ ಕರ್ತುತ್ವಾಚ' ಪ್ರಶಸ್ತಿ, ಐಟಿಐ ಇಂಜಿನಿಯರಿಂಗ್ ಕೌನ್ಸಿಲ್‌ನಿಂದ 'ಬೆಸ್ಟ್ ಬಿಸಿನೆಸ್ ವುಮೆನ್' ಪ್ರಶಸ್ತಿ, ಸ್ಪೀಡ್ ನ್ಯೂಸ್ ಲೈವ್ 24ದಿಂದ 'ಐಕಾನ್ ವಿಮೆನ್-2020' ಪ್ರಶಸ್ತಿ, ರೇಡಿಯೋ ಸಿಟಿ 95 ಎಫ್‌ಎಂದಿಂದ 'ನಾರಿ ಸನ್ಮಾನ-2020' ಪ್ರಶಸ್ತಿ, ಮಹಾರಾಷ್ಟ್ರ ಇಂಡಸ್ಟ್ರಿಯಲ್ ಸಂಸ್ಥೆಯಿಂದ ಮಹಿಳಾ ವಿಭಾಗದಲ್ಲಿ 'ಪ್ರೈಡ್ ಆಫ್ ಮಹಾರಾಷ್ಟ್ರ ಅವಾರ್ಡ್-2021' ಪ್ರಶಸ್ತಿ, ಅಖಿಲ ಭಾರತ ಮಹಿಳಾ ಮರಾಠಾ ಮಂಡಲದಿಂದ 'ತೇಜಸ್ವಿನಿ ಪುರಸ್ಕಾರ', ಚೇತನ್ ವಿಕಾಸ್ ಸ್ಕೂಲ್ ಆಫ್ ಕೊಲ್ಲಾಪುರ್‌ದಿಂದ 'ಆದರ್ಶ ಪಾಲಕ' ಪ್ರಶಸ್ತಿ, ಮೌಂಟ್ ಅಬುದಲ್ಲಿ ನಡೆದ ಬ್ರಹ್ಮಕುಮಾರಿ ಶಿವ ಶಕ್ತಿ ನಾಯಕತ್ವ ವಿಧಾನ ವಿಚಾರ ಸಂಕೀರಣದಲ್ಲಿ 'ಶಿವಶಕ್ತಿ ನಾಯಕತ್ವ' ಪ್ರಶಸ್ತಿ ಹೀಗೆ ಹಲವು ಪ್ರಶಸ್ತಿಗಳನ್ನು ಇವರು ಪಡೆದಿದ್ದಾರೆ.

ಇನ್ನರ್‌ವ್ಹೀಲ್ ಕ್ಲಬ್ ಅಲ್ಲದೇ ದ ನ್ಯೂ ಎಜ್ಯುಕೇಶನ್ ಸೊಸೈಟಿಯ ಸದಸ್ಯರಾಗಿ, ಪ್ರಿನ್ಸೆಸ್ ಪದ್ಮರಾಜೆ ಬಾಲಕಿಯರ ಶಾಲೆ ಮತ್ತು ಕಾಲೇಜಿನ ಅಧ್ಯಕ್ಷರಾಗಿ, ಕೊಲ್ಲಾಪುರದ ಮಾತೃಶ್ರೀ ವೃದ್ಧಾಶ್ರಮದ ಕಾರ್ಯಕಾರಿ ಮಂಡಳಿಯ ಸದಸ್ಯರಾಗಿ ಅಷ್ಟೇ ಅಲ್ಲದೆ ಅನೇಕ ಸಂಘ-ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ.

ಪ್ರತಿ ಯಶಸ್ಸಿನ ಹಿಂದೆ ಹೋರಾಟದ ಒಂದು ಕಾಣದ ಅಧ್ಯಾಯವಿರುತ್ತದೆ. ಮಿತಿಯನ್ನು ಪರೀಕ್ಷಿಸುವ ಅನೇಕ ಸವಾಲುಗಳನ್ನು ಎದುರಿಸಿ ಸಾಧಿಸಿದ ಸಾಧನೆ ಇತರರಿಗೆ ಸ್ಫೂರ್ತಿದಾಯಕವಾಗಿರುತ್ತದೆ. ಉತ್ಕರ್ಷಾ ಸಂಗ್ರಾಮ್ ಪಾಟೀಲ್ ಅವರ ಪಯಣವು ಇಂತಹ ಒಂದು ಸಾಧನೆಗೆ ಮಾದರಿಯಾಗಿದೆ.

ಜಿಲ್ಲಾ 317 ಚೇರಮನ್‌ರಾದ ಉತ್ಕರ್ಷಾ ಸಂಗ್ರಾಮ್ ಪಾಟೀಲ್ ಇವರಿಗೆ ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ ಸ್ವಾಗತವನ್ನು ಕೋರುತ್ತೇವೆ.

**- ವೀಣಾ ಕಾವೇರಿ.**
ಸಂಪಾದಕರು, ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿ.

**ಸಿಐಟಿಯು ಸಂಯೋಜಿತ ಗಜೇಂದ್ರಗಡ ತಾಲೂಕಾ ಸಮಿತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಬೃಹತ್ ಮೆರವಣಿಗೆ**

# ಬೀದಿ ಬದಿ ವ್ಯಾಪಾರಸ್ಥರ ಹಕ್ಕುಗಳು ರಕ್ಷಣೆಯಾಗಲಿ



ಪ್ರಾಸ್ತಾವಿಕವಾಗಿ ತಾಲೂಕು ಕಾರ್ಯದರ್ಶಿ ಪೀರು ರಾಠೋಡ ಮಾತನಾಡಿ, ಗಜೇಂದ್ರಗಡ ನಗರವು ವ್ಯಾಪಾರಸ್ಥರ ಕೇಂದ್ರವಾಗಿದ್ದು, ವ್ಯಾಪಾರ ಬೆಳೆಯುತ್ತಲೇ ಇದೆ. ನಗರದಲ್ಲಿನ ಬೀದಿ ಬದಿ ವ್ಯಾಪಾರ ಮಾಡುವ ವ್ಯಾಪಾರಸ್ಥರ ಬದುಕು ಕಷ್ಟಕರವಾಗಿದೆ. ಈ ಹಿನ್ನೆಲೆಯಲ್ಲಿ ಸರ್ಕಾರಗಳು ಅವರಿಗೆ ನೀಡಬೇಕಾದ ಕಾನೂನುಬದ್ಧ ಸೌಲಭ್ಯಗಳನ್ನು ನೀಡದಿದ್ದಾಗ ಬೀದಿಗೆ ಇಳಿದು ನ್ಯಾಯಯುತವಾಗಿ ಹೋರಾಟ ಮಾಡಿ ಕೆಲವು ಬೇಡಿಕೆಗಳನ್ನು ಈಡೇರಿಸಿಕೊಳ್ಳಲು ಸಂಘದ ನೇತೃತ್ವದಲ್ಲಿ ಸಾಧ್ಯವಾಗಿದೆ ಎಂದರು.

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಕರ್ನಾಟಕ ರಾಜ್ಯ ಬೀದಿಬದಿ ವ್ಯಾಪಾರಸ್ಥರ ಸಂಘ ಸಿಐಟಿಯು ಸಂಯೋಜಿತಗ ಜೇಂದ್ರಗಡ ತಾಲೂಕಾ ಸಮಿತಿಯು ಬೀದಿಬದಿ ವ್ಯಾಪಾರಸ್ಥರ ಹಕ್ಕುಗಳ ರಕ್ಷಣೆಗಾಗಿ ಹಾಗೂ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಬೃಹತ್ ಮೆರವಣಿಗೆ, ತಾಲೂಕು ಸಮ್ಮೇಳನ ಹಮ್ಮಿಕೊಂಡಿತು.

ಬಹಿರಂಗ ಸಭೆಯನ್ನು ಸಂಘದ ಗೌರವಾಧ್ಯಕ್ಷ ಮತ್ತು ಕೃಷಿ ಕೂಲಿಕಾರರ ಸಂಘದ ತಾಲೂಕು ಅಧ್ಯಕ್ಷ ಬಾಲು ರಾಠೋಡ ಉದ್ಘಾಟಿಸಿ ಮಾತನಾಡಿ, ಇಂದು ನಡೆದ ಬೃಹತ್ ಮೆರವಣಿಗೆಯು ನಮ್ಮ ಹಕ್ಕುಗಳಿಗಾಗಿ ಜನರಲ್ಲಿ ಜಾಗೃತಿ ಮೂಡಿಸಲು ಸಹಕಾರಿಯಾಗಿದೆ. ಈ ಮೂಲಕ ಜನರ ಮಧ್ಯೆ ಚರ್ಚೆಯನ್ನು ಹುಟ್ಟುಹಾಕಿದ ಕರ್ನಾಟಕ ರಾಜ್ಯ ಬೀದಿಬದಿ ವ್ಯಾಪಾರಸ್ಥರ ಸಂಘವು ಗಜೇಂದ್ರಗಡದಲ್ಲಿ 2014ರಿಂದಲೇ ಕಾರ್ಯ ನಿರ್ವಹಿಸುತ್ತಿದ್ದು, ಅನೇಕ ಹೋರಾಟಗಳನ್ನು ಮಾಡಿದೆ ಎಂದರು.

ಯುವ ಮುಖಂಡ ಎಫ್. ಎಫ್. ತೋಟದ ಮಾತನಾಡಿ, ಈ ಸಮ್ಮೇಳನ ಅಚ್ಚುಕಟ್ಟಾಗಿ ನಡೆಯುತ್ತಿದೆ. ಸಮ್ಮೇಳನದ ಮೂಲಕ ಮತ್ತೆ ಹೊಸ ಬೇಡಿಕೆಗಳ ಆಧಾರದಲ್ಲಿ ಹೋರಾಟಗಳನ್ನು ರೂಪಿಸಿ ನ್ಯಾಯ ಪಡೆಯಿರಿ. ಸಮ್ಮೇಳನ ಯಶಸ್ವಿಯಾಗಲಿ ಎಂದು ಹಾರೈಸುತ್ತೇನೆ ಎಂದರು.

ತಾಲೂಕು ಉಪಾಧ್ಯಕ್ಷ ಮಾಂಡ್ರೆ, ಎಸ್‌ಎಫ್‌ಐ ರಾಜ್ಯ ಉಪಾಧ್ಯಕ್ಷ ಗಣೇಶ್ ರಾಥೋಡ್, ಬೀದಿಬದಿ ವ್ಯಾಪಾರಸ್ಥರ ಸಂಘಟನೆಯ ತಾಲೂಕು ಅಧ್ಯಕ್ಷ ಎಸ್.ಬಿ. ದಿಂಡವಾಡ್ ಮಾತನಾಡಿದರು. ಪೀರು ರಾಠೋಡ ಕಾರ್ಯಕ್ರಮ ನಿರ್ವಹಿಸಿದರು. ವೇದಿಕೆಯ ಮೇಲೆ ಸಿಐಟಿಯು ಮುಖಂಡರಾದ ಮೈಬು ಹವಾಲ್ದಾರ್, ಕಟ್ಟಡ ಕಾರ್ಮಿಕರ ಸಂಘದ ತಾಲೂಕಾಧ್ಯಕ್ಷ ಅಂದಪ್ಪ ಕುರಿ, ಎಸ್.ಎಫ್. ಜಿಲ್ಲಾಧ್ಯಕ್ಷ ಚಂದ್ರು ರಾಥೋಡ್, ಪಿವಿಸಿ ಕಮಿಟಿಯ ಸದಸ್ಯ ಚೌಡಮ್ಮ ಯಲ್ಪು, ರಾಜು ಮಾಂಡ್ರೆ, ಮಂಜುಳಾ ಪಮ್ಮಾರ ಚಂದ್ರಶೇಖರ ರಾಠೋಡ, ಅಂಬರೀಶ್ ಚವ್ಹಾಣ, ಕಳಕಪ್ಪ ಮಾಳೋತ್ತರ, ಕೆ.ಸಿ. ಗೋಡೇಕಾರ, ಉಮೇಶ ನಾವಡೆ, ಸುನೀಲ್ ಕುಂಬಾರ, ಮುತ್ತಣ್ಣ ರಾಠೋಡ, ಅನ್ವರಬಾಸ್ ಹಿರೇಕೊಪ್ಪ, ಮೈಬುಬ ಮಾಲ್ದಾರ, ವಿಷ್ಣು ಚಂದುಕರ, ಗಂಗಾಧರ್ ಸತ್ಯಣವರ, ಸಬೀನಾ ಮುಧೋಳ, ದೇವಕ್ಕ ರಾಠೋಡ, ರೇಣವ್ವ ರಾಠೋಡ ಮುಂತಾದವರಿದ್ದರು.

# ಕಠಿಣ ಪರಿಶ್ರಮದಿಂದ ಯಶಸ್ಸು ಸಾಧ್ಯ




**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಕಠಿಣ ಪರಿಶ್ರಮದಿಂದ ಯಶಸ್ಸು ಹೊಂದಲು ಸಾಧ್ಯ ಎಂದು ಬಿ.ಎಂ. ಎಸ್ ಆಂಗ್ಲ ಮಾಧ್ಯಮ ಶಾಲೆಯ ಪ್ರಧಾನ ಗುರು ಫಾತೀಮಾ ಖವಾಸ ಹೇಳಿದರು.

ಅವರು ಪಟ್ಟಣದ ಬಿ.ಎಂ. ಎಸ್ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ಮುಳಗುಂದ ಕ್ಲಸ್ಟರ್ ಮಟ್ಟದ ಪ್ರತಿಬಾ ಕಾರಂಜಿ ಪ್ರೌಢಶಾಲಾ ವಿಭಾಗದಲ್ಲಿ ಸಾಧನೆಗೈದ ಹಿನ್ನೆಲೆಯಲ್ಲಿ ಅಭಿನಂದಿಸಿ ಮಾತನಾಡಿ, ವಿದ್ಯಾರ್ಥಿ ಜೀವನ ಬಂಗಾರದ ಜೀವನ.

ಅದನ್ನು ಈ ಪ್ರಾಥಮಿಕ ಹಾಗೂ ಪ್ರೌಢ ಹಂತದಲ್ಲಿ ಸದ್ಬಳಕೆ ಮಾಡಿಕೊಂಡಲ್ಲಿ ಮುಂದಿನ ಹಂತದ ಅಭ್ಯಾಸಕ್ಕೆ ಸಹಕಾರಿಯಾಗುತ್ತದೆ. ಕಠಿಣ ಪರಿಶ್ರಮ, ಸತತ ಪ್ರಯತ್ನ, ಛಲ, ಗುರಿಗಳನ್ನು ಮೈಗೂಡಿಸಿಕೊಂಡಲ್ಲಿ ಯಶಸ್ಸು ಕಟ್ಟಿಟ್ಟ ಬುತ್ತಿ ಎಂದರು.

ಸಾಧನೆಗೈದ ವಿದ್ಯಾರ್ಥಿಗಳಾದ ಪ್ರಣತಿ ಅರಳಿ, ತಸ್ಲಿಂಬಾನು ಮುಲ್ಲಾ, ಗೀತಾ ಬಂಗಿ, ಬದ್ರುನಿಸಾ ಯಳವತ್ತಿ, ಅದಿತಿ ಕೆರಕನ್ನವರ, ಭುವನೇಶ್ವರಿ ಮಲ್ಲರೆಡ್ಡಿ, ಮಿಜಬಾ ದುರ್ಗಿಗುಡಿ, ಅನುಷಾ ಪಾಟೀಲ, ಅಮಿರಸುಹೇಲ ಸದರಭಾವಿ, ಶಿಕ್ಷಕಿಯರಾದ ಉಮಾ ಬ್ಯಾಳಿ, ಆಸಮಾ ಸೌದತ್ತಿ, ಶಿವಲಿಂಗಪ್ಪ ಕೊಂಡಿಕೊಪ್ಪ, ಪೂಜಾ ಮ್ಯಾಗೇರಿ, ಗೀತಾ ಕುಲಕರ್ಣಿ ಇದ್ದರು.

# ದೆಹಲಿ ವಾಯುಮಾಲಿನ್ಯ : ಏರ್ ಪ್ಯೂರಿಫೈಯರ್ ಜಿಎಸ್‌ಟಿ ಕಡಿತಕ್ಕೆ ಕೇಂದ್ರ ಆಕ್ಷೇಪ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಏರ್‌ಪ್ಯೂರಿಫೈಯರ್ ಸಾಧನಗಳ ಮೇಲಿನ ಜಿಎಸ್‌ಟಿ ಕಡಿತಗೊಳಿಸುವಂತೆ ಜಿಎಸ್‌ಟಿ ಮಂಡಳಿಗೆ ಆದೇಶಿಸಿದರೆ ಅದು ಅಂತಹ ಇನ್ನಷ್ಟು ಪ್ರಕರಣಗಳು ಹೆಚ್ಚಳವಾಗಲು ಕಾರಣವಾಗುತ್ತದೆ (Pandora Box)ಎಂದು ಕೇಂದ್ರ ಸರ್ಕಾರ ಶುಕ್ರವಾರ (ಡಿ.26) ದೆಹಲಿ ಹೈಕೋರ್ಟ್‌ಗೆ ತಿಳಿಸಿದೆ.

ದೆಹಲಿ ಎನ್‌ಸಿಆರ್ ಪ್ರದೇಶದಲ್ಲಿ ವಿಪರೀತ ವಾಯುಮಾಲಿನ್ಯ ಹಿನ್ನೆಲೆ, ಗಾಳಿ ಶುದ್ಧೀಕರಿಸುವ ಏರ್ ಏರ್ ಪ್ಯೂರಿಫೈಯರ್ ಯಂತ್ರಗಳನ್ನು 'ವೈದ್ಯಕೀಯ ಸಾಧನ' ಎಂದು ಘೋಷಿಸಿ, ಅದಕ್ಕೆ ಶೇಕಡ 18ರ ಬದಲು 5ರಷ್ಟು ಜಿಎಸ್‌ಟಿ ವಿಧಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ವೇಳೆ ನ್ಯಾಯಮೂರ್ತಿಗಳಾದ ವಿಕಾಸ್ ಮಹಾಜನ್ ಮತ್ತು ವಿನೋದ್ ಕುಮಾರ್ ಅವರಿದ್ದ ಪೀಠಕ್ಕೆ ಸರ್ಕಾರ ಪ್ರತಿಕ್ರಿಯೆ ನೀಡಿದೆ. ಈ ವಿಚಾರವನ್ನು ಉನ್ನತ ಮಟ್ಟದಲ್ಲಿ ಪರಿಶೀಲಿಸಲಾಗುತ್ತಿದೆ ಎಂದು ತಿಳಿಸಿದ ಕೇಂದ್ರ ಸರ್ಕಾರ, ಸೂಕ್ತ ಉತ್ತರ ನೀಡುವುದಕ್ಕೆ ಇನ್ನಷ್ಟು ಸಮಯಾವಕಾಶ ಬೇಕು ಎಂದು ಕೋರಿದೆ. ಕೇಂದ್ರ ಸರ್ಕಾರವನ್ನು ಪ್ರತಿನಿಧಿಸಿದ್ದ ಹೆಚ್ಚುವರಿ ಸಾಲಿಸಿಟರ್ ಜನರಲ್ ಎನ್. ವೆಂಕಟರಾಮನ್ ಅವರು, ಪ್ರಕರಣದಲ್ಲಿ ಜಿಎಸ್‌ಟಿ ಮಂಡಳಿ ಹೊಂದಿರುವ ವ್ಯವಸ್ಥೆಗೆ ಹೊರತಾಗಿ ನಡೆದುಕೊಂಡರೆ, ಸೂಕ್ತ ಪ್ರಕ್ರಿಯೆಯನ್ನು ಅನುಸರಿಸದೆ ಹೋದರೆ ಆಗ ಜಿಎಸ್‌ಟಿ ವಿನಾಯಿತಿ ಕೋರುವ ಪ್ರಕರಣಗಳ ಸಂಖ್ಯೆ ಹೆಚ್ಚಬಹುದು ಎಂದು ಆತಂಕ ವ್ಯಕ್ತಪಡಿಸಿದರು.

# ಕ್ರಿಸ್‌ಮಸ್ ವೇಳೆ ಶಾಲೆಗೆ ನುಗ್ಗಿ ದಾಂಧಲೆ ಆರೋಪ; ವಿಎಚ್‌ಪಿ-ಬಜರಂಗದಳದ ನಾಲ್ವರ ಬಂಧನ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ನಲ್ಬರಿ ಜಿಲ್ಲೆಯ ಶಾಲೆಯೊಂದಕ್ಕೆ ನುಗ್ಗಿ ಕ್ರಿಸ್‌ಮಸ್ ಅಲಂಕಾರವನ್ನು ಧ್ವಂಸ ಮಾಡಿದ, ವಿಶ್ವ ಹಿಂದೂ ಪರಿಷತ್ (ವಿಹೆಚ್‌ಪಿ) ಮತ್ತು ಬಜರಂಗದಳದ ನಾಲ್ವರನ್ನು ಅಸ್ಸಾಂ ಪೊಲೀಸರು ಗುರುವಾರ (ಡಿ.25) ಬಂಧಿಸಿದ್ದಾರೆ.

ಬಂಧಿತರನ್ನು ವಿಹೆಚ್‌ಪಿ ಜಿಲ್ಲಾ ಕಾರ್ಯದರ್ಶಿ ಭಾಸ್ಕರ್ ದೇಕಾ, ಜಿಲ್ಲಾ ಉಪಾಧ್ಯಕ್ಷ ಮನಶ್ ಜ್ಯೋತಿ ಪಟಗಿರಿ, ಸಹಾಯಕ (ಜೊತೆ) ಕಾರ್ಯದರ್ಶಿ ಬಿಜು ದತ್ತ ಮತ್ತು ಬಜರಂಗದಳದ ಜಿಲ್ಲಾ ಸಂಚಾಲಕ ನಯನ್ ತಾಲ್ಲೂಕುದಾರ್ ಎಂದು ಗುರುತಿಸಲಾಗಿದೆ.

ಬಂಧಿತರು ಬುಧವಾರ (ಡಿ.24) ನಲ್ಬರಿ ಜಿಲ್ಲೆಯ ಪಾಣಿಗಾಂವ್ ಗ್ರಾಮದ ಸೇಂಟ್ ಮೇರಿಸ್ ಶಾಲೆಗೆ ನುಗ್ಗಿ ದಾಂಧಲೆ ನಡೆಸಿದ್ದರು. ಶಾಲೆಯಲ್ಲಿ ಕ್ರಿಸ್‌ಮಸ್ ಪ್ರಯುಕ್ತ ಮಾಡಲಾಗಿದ್ದ ಅಲಂಕಾರವನ್ನು ಹಾಳುಗೆಡವಿ ಬೆಂಕಿ ಹಚ್ಚಿದ್ದರು. "ಜೈಶ್ರೀರಾಮ್" ಎಂಬ ಘೋಷಣೆಗಳನ್ನು ಕೂಗಿದ್ದರು. ಈ ಕುರಿತು ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು.

ಆರೋಪಿಗಳ ವಿರುದ್ಧ ಕ್ರಿಮಿನಲ್ ಅತಿಕ್ರಮಣ, ಕಾನೂನುಬಾಹಿರ ಸಭೆ, ಕ್ರಿಮಿನಲ್ ಬೆದರಿಕೆ ಮತ್ತು ಕ್ರಿಮಿನಲ್ ಪಿತೂರಿ ಸೇರಿದಂತೆ ಹಲವು ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) ಕಾಯ್ದೆಯ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

# ಕ್ರೀಡಾಕೂಟದಲ್ಲಿ ಪಾಲ್ಗೊಳ್ಳುವುದು ಮುಖ್ಯ



**■ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ಸೋಲು ನಾಳೆಯ ಗೆಲವಿಗೆ ಮುನ್ನುಡಿಯಾಗುತ್ತದೆ. ವಾರ್ಷಿಕ ಕ್ರೀಡಾಕೂಟದಲ್ಲಿ ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಳ್ಳುವದು ಮುಖ್ಯ ಎಂದು ನಿವೃತ್ತ ಪ್ರಾಚಾರ್ಯ ಉಮೇಶ ಹಿರೇಮಠ ಹೇಳಿದರು.

ಅವರು ಗದುಗಿನ ಎಸ್.ಎಸ್.ಕೆ ಶ್ರೀ ಜಗದಂಬಾ ಶಿಕ್ಷಣ ಕೇಂದ್ರದ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ 2025-26ನೇ ಸಾಲಿನ ವಾರ್ಷಿಕ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮ ದಿನನಿತ್ಯದ ಪಠ್ಯದ ಅಭ್ಯಾಸದೊಂದಿಗೆ ಪಠ್ಯೇತರ ಚಟುವಟಿಕೆಗಳಾದ ಕ್ರೀಡೆಗಳಲ್ಲಿಯೂ ಸಹ ಆಸಕ್ತಿ ಹೊಂದಬೇಕು. ಇದರಿಂದಾಗಿ ಬೌದ್ಧಿಕ ಬೆಳವಣಿಗೆಯೊಂದಿಗೆ ದೈಹಿಕ ಬೆಳವಣಿಗೆಯೂ ಆಗಿ ಆರೋಗ್ಯದಲ್ಲಿ ಸದೃಢತೆಯನ್ನು ಹೊಂದಬಹುದಾಗಿದೆ. ಆದ್ದರಿಂದ ಎಲ್ಲ ವಿದ್ಯಾರ್ಥಿಗಳು ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಿ ಎಂದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಎಸ್.ಎಸ್.ಕೆ ಜಗದಂಬಾ ಶಿಕ್ಷಣ ಕೇಂದ್ರದ ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ್ ಮಾತನಾಡಿ, ನಮ್ಮ ಶಾಲೆಯ ವಿದ್ಯಾರ್ಥಿಗಳು ಉತ್ತಮ ಅಭ್ಯಾಸ ಮಾಡಿ, ಎಲ್ಲ ಕ್ರೀಡೆಗಳಲ್ಲಿ ಭಾಗಹಿಸಿ ಪ್ರತಿಭಾನ್ವಿತರಾಗಬೇಕು ಎಂದರು.

ವೇದಿಕೆಯ ಮೇಲೆ ಶಾಲೆಯ ಚೇರಮನ್ ಶ್ರೀನಿವಾಸ ಖಟವಟೆ, ಉಪಚೇರಮನ್ ವಿಶ್ವನಾಥ ಖಟವಟೆ, ಆಡಳಿತ ಮಂಡಳಿಯ ಸದಸ್ಯರಾದ ಮಾರುತಿ ಪವಾರ ಉಪಸ್ಥಿತರಿದ್ದರು.

**ಹಾಲಕೆರೆ ಶ್ರೀ ಅನ್ನದಾನೇಶ್ವರ ಜಾತ್ರೋತ್ಸವದಲ್ಲಿ ಗಂಗಾವತಿ ಪ್ರಾಣೇಶ್ ಅಭಿಮತ**

# ಮಾತೃಭಾಷೆಯನ್ನು ಎಂದಿಗೂ ಮರೆಯಬಾರದು

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನಗುನಗುತ್ತ ಇದ್ದರೆ ಜೀವನ ಸುಖಮಯವಾಗುತ್ತದೆ. ಇದರೊಂದಿಗೆ ಜೀವನದ ತತ್ವವೂ ಸೇರಿಕೊಂಡರೆ ಮನುಷ್ಯನ ಬದುಕು ಸತ್ವಮಯವಾಗುತ್ತದೆ. ಹಾಸ್ಯಬ್ರಹ್ಮ ಬೀಚಿ ನಗೆಯ ಗುಳಿಗೆಗಳೊಂದಿಗೆ ಇಂತಹ ಸಂದೇಶಗಳನ್ನು ತಮ್ಮ ಕೃತಿಗಳಲ್ಲಿ ಸಾಕಷ್ಟು ನೀಡಿದ್ದಾರೆ. ಆದ್ದರಿಂದ ಬೀಚಿಯವರ ಪುಸ್ತಕಗಳನ್ನು ಓದುವ ಹವ್ಯಾಸವನ್ನು ರೂಢಿಸಿಕೊಳ್ಳಬೇಕೆಂದು ಹಾಸ್ಯ ಭಾಷಣಕಾರ ಗಂಗಾವತಿ ಪ್ರಾಣೇಶ್ ಹೇಳಿದರು.

ಸಮೀಪದ ಹಾಲಕೆರೆ ಗ್ರಾಮದ ಶ್ರೀ ಅನ್ನದಾನೇಶ್ವರ ಜಾತ್ರೋತ್ಸವದಲ್ಲಿ ಅವರು ನಗೆಹಬ್ಬ ಕಾರ್ಯಕ್ರಮದಲ್ಲಿ ಮಾತನಾಡಿದರು.

ಈಗಿನ ದಿನಗಳಲ್ಲಿ ನಮ್ಮ ಮಕ್ಕಳು ಇಂಗ್ಲೀಷ್ ಮಾಧ್ಯಮದಲ್ಲಿ ಓದುವುದು ಒಂದು ದೊಡ್ಡ ಫ್ಯಾಷನ್ ಆಗಿದೆ. ಲೋಕದ ಜ್ಞಾನ ಸಂಗ್ರಹಣೆಗೆ ಇಂಗ್ಲೀಷ್ ಬೇಕೇಬೇಕು. ಹಾಗೆಂದು ಹೆತ್ತ ತಾಯಿಯಾಗಿರುವ ನಮ್ಮ ಮಾತೃ ಭಾಷೆಯನ್ನು ಎಂದಿಗೂ ಮರೆಯಬಾರದು. ಕನ್ನಡ ಮಾಧ್ಯಮದಲ್ಲಿ ಕಲಿತ ಮಕ್ಕಳಿಗಿರುವ ಧೈರ್ಯ, ವಾಸ್ತವ ಪ್ರಜ್ಞೆ ಇಂಗ್ಲೀಷ್ ಮಾಧ್ಯಮದ ಮಕ್ಕಳಲ್ಲಿ ಕಡಿಮೆ ಎಂಬುದು ನನ್ನ ಭಾವನೆ. ಆದ್ದರಿಂದ ನಿಮ್ಮ ಮಕ್ಕಳನ್ನು ಕನ್ನಡ ಮಾಧ್ಯಮದಲ್ಲಿಯೆ ಓದಿಸಿ, ಕನ್ನಡ ಶಾಲೆಗಳನ್ನು ಬೆಳೆಸಿ ಎಂದರು. ಕನ್ನಡ ಸಾಹಿತ್ಯ ಜಗತ್ತಿನ ಯಾವುದೇ ಸಾಹಿತ್ಯಕ್ಕೂ ಕಡಿಮೆ ಇಲ್ಲ. ಆದಿ ಕವಿ ಪಂಪನಿಂದ ಈಗಿನವರೆಗಿನ ಕನ್ನಡ ಸಾಹಿತಿಗಳು ಕನ್ನಡದ ಕಂಪನ್ನು ಜಗತ್ತಿಗೆ ಪಸರಿಸಿದ್ದಾರೆ. 12ನೇ ಶತಮಾನದ ಶಿವಶರಣರು ರಚಿಸಿದ ವಚನಗಳಲ್ಲಿ ಸಾಹಿತ್ಯಕ್ಕೇನು ಕೊರತೆಯಿದೆ? ನಿಮ್ಮ ಮಕ್ಕಳಲ್ಲಿ ಸಾಹಿತ್ಯದ ಅಭಿರುಚಿಯನ್ನು ಬೆಳೆಸಲು ಪಾಲಕರು ನಿತ್ಯವೂ ಒಂದೆರಡು ಗಂಟೆ ಅವರ ಮುಂದೆ ಪುಸ್ತಕಗಳನ್ನು ಓದುವ ಹವ್ಯಾಸವನ್ನು ರೂಢಿಸಿಕೊಳ್ಳಬೇಕು. ಹಾಲಕೆರೆ ಶ್ರೀಮಠದ ಪೂಜ್ಯರು ನಮ್ಮನ್ನು ಪ್ರತಿ ವರ್ಷವೂ ಇಲ್ಲಿ ಕರೆಯಿಸಿ ಆಶೀರ್ವದಿಸುತ್ತಿರುವುದು ನಮ್ಮ ಪುಣ್ಯ ವಿಶೇಷವೆಂದರು.

ಹಾಸ್ಯ ಭಾಷಣಕಾರರಾದ ಬಸವರಾಜ ಮಹಾಮನಿ ಮತ್ತು ನರಸಿಂಹ ಜೋಷಿ ನೀಡಿದ ಕಾರ್ಯಕ್ರಮ ಮತ್ತು ನಗೆಹನಿಗಳ ಸುರಿಮಳೆ ನೆರೆದ ಸ್ವಾಮೀಜಿಗಳಿಗೆ, ಭಕ್ತರಿಗೆ ಮುದ ನೀಡಿದವು.




ಆಶೀರ್ವಚನ ನೀಡಿದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು, ಜಾತ್ರೆಯೆಂದರೆ ಬರೀ ಮೋಜು-ಮಸ್ತಿಯಲ್ಲ. ಮನುಷ್ಯನಿಗೆ ರಂಜನೆ ಬೇಕು. ಶರಣರ ಕಾಲದಲ್ಲಿಯೂ ನಗೆಮಾರಿ ತಂದೆ ಎನ್ನುವ ರಂಜನೀಯಕಾರರು ಇದ್ದರು. ಇಂದಿನ ಕಾಲದಲ್ಲಿ ಗಂಗಾವತಿ ಪ್ರಾಣೇಶ್ ಮತ್ತವರ ತಂಡದವರು ನಗೆಮಾರಿ ತಂದೆಗಳಾಗಿ ನಮ್ಮನ್ನು ರಂಜಿಸುತ್ತಿದ್ದಾರೆ. ಅವರ ಮೂಲಕ ವಿಷಯಗಳನ್ನು ತಿಳಿಸಿದರೆ ಸುಲಭವಾಗಿ ಅರ್ಥವಾಗುತ್ತದೆ ಎಂದು ಅವರನ್ನು ಕರೆಯಿಸುತ್ತಿದ್ದೇವೆ ಎಂದರು.

## ನಿವೃತ್ತ ನೌಕರರ ಸಂಘ ಅಸ್ತಿತ್ವಕ್ಕೆ





■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡಗಳ ನಿವೃತ್ತ ನೌಕರರ ಗದಗ ಸಂಘವನ್ನು ಸ್ಥಾಪಿಸಲಾಗಿದೆ.

ಸಂಘದ ಗೌರವ ಅಧ್ಯಕ್ಷರಾಗಿ ನಿವೃತ್ತ ಪ್ರಾಚಾರ್ಯ ದೇವಪ್ಪ ಗಾಳೆಪ್ಪ ಜೋಗಣ್ಣವರ, ಅಧ್ಯಕ್ಷರಾಗಿ ಹನಮಪ್ಪ ಎಚ್.ದೊಡ್ಡಮನಿ, ಉಪಾಧ್ಯಕ್ಷರಾಗಿ ಬಸವಪ್ಪ ಎ.ದೊಡ್ಡಮನಿ, ಬಸಪ್ಪ ಜಿ.ಕೆಂಗಾರಕರ, ಪರಸಪ್ಪ ಎನ್. ಜಿಗಳೂರ, ಕಾರ್ಯದರ್ಶಿಯಾಗಿ ಹನಮಂತಪ್ಪ ಸಿ.ಕೊಪ್ಪಳ, ಖಜಾಂಚಿಯಾಗಿ ಬಸವರಾಜ ಕೆ.ಹೊಸಮನಿ, ಆಡಳಿತ ಮಂಡಳಿಯ ಸದಸ್ಯರಾಗಿ ಮಂಜಪ್ಪ ಎಚ್.ಸಾಲಿ, ತಾರಕೇಶ್ವರ ಎಚ್. ಕಜ್ಜರಿ, ಅಶೋಕ ಬೆಣಗಿ ಹಾಗೂ ಸಹ ಕಾರ್ಯದರ್ಶಿಯಾಗಿ ಆನಂದ ಅವರನ್ನು ಆಯ್ಕೆ ಮಾಡಲಾಗಿದೆ.

ಸರ್ಕಾರದ ಸೌಲಭ್ಯ ಒದಗಿಸುವ, ಶೈಕ್ಷಣಿಕ, ಸ್ವಯಂ ಉದ್ಯೋಗ, ಟೇಲರಿಂಗ್, ಕಸೂತಿ, ಗೃಹಕೈಗಾರಿಕೆ, ಬಡಿಗತನ, ಕಂಪ್ಯೂಟ್ ಸೆಂಟರ್, ಇಂಟರ್‌ನೆಟ್ ಸೆಂಟರ್ ಸ್ಥಾಪಿಸುವದು ಹಾಗೂ ಸ್ವಯಂ ಉದ್ಯೋಗ ಮಾಹಿತಿ ಕೇಂದ್ರ ಹೀಗೆ ಸಮಾಜಮುಖಿ ಮತ್ತು ಜನಮುಖಿಯಾಗಿ ಕಾರ್ಯ ಮಾಡುವ ಉದ್ದೇಶವನ್ನು ಸಂಘವು ಹೊಂದಿದೆ ಎಂದು ಕಾರ್ಯದರ್ಶಿ ಎಚ್.ಸಿ. ಕೊಪ್ಪಳ ತಿಳಿಸಿದ್ದಾರೆ.

### ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಟ್ರಸ್ಟ್ ಆಶ್ರಯದಲ್ಲಿ ಜನ ಜಾಗೃತಿ ಧರ್ಮ ಸಮಾರಂಭ


# ಸತ್ಯದ ತಳಹದಿಯಲ್ಲಿ ಸೈದ್ಧಾಂತಿಕ ನಿಲುವು ಗಟ್ಟಿಗೊಳ್ಳಲಿ

■ವಿಜಯಸಾಕ್ಷಿ ಸುದ್ದಿ, ತುಮಕೂರು

ಭೌತಿಕ ಜೀವನ ಸಮೃದ್ಧಗೊಂಡಂತೆ ಆಂತರಿಕ ಬದುಕು ಪರಿಶುದ್ಧಗೊಳ್ಳಬೇಕಾಗಿದೆ. ಧರ್ಮದ ದಿಕ್ಸೂಚಿ ಇಲ್ಲದೇ ಹೋದರೆ ಮಾನವ ಜೀವನ ನಿರರ್ಥಕ. ವೀರಶೈವರು, ಲಿಂಗಾಯತರು ಒಂದಾಗಿ ಬಾಳಿದರೆ ಧರ್ಮಕ್ಕೆ ಉಜ್ವಲ ಭವಿಷ್ಯವಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ನಗರದ ವಿಶಾಲಾಕ್ಷಮ್ಮ ಸದಾಶಿವಯ್ಯ ಸಭಾಭವನದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಟ್ರಸ್ಟ್ ಆಶ್ರಯದಲ್ಲಿ ಜರುಗಿದ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಜೀವನದಲ್ಲಿ ಧರ್ಮ, ಅರ್ಥ, ಕಾಮ, ಮೋಕ್ಷ ಎಂಬ ನಾಲ್ಕು



ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸಿಕೊಳ್ಳದಿದ್ದರೆ ಮಾನವ ಜೀವನ ನಿರರ್ಥಕವಾಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಧರ್ಮದ ದಶವಿಧ ಸೂತ್ರಗಳನ್ನು ಬೋಧಿಸಿ ಎಲ್ಲರನ್ನು ಉದ್ಧರಿಸಿದ್ದಾರೆ. ವೀರಶೈವ ಧರ್ಮ ವೃಕ್ಷದ ತಾಯ್ಬೇರು ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರು. ಆದರೆ ಆ ಧರ್ಮ ವೃಕ್ಷದ ಹೂ-ಹಣ್ಣುಗಳಂತೆ ಬಸವಾದಿ ಶಿವಶರಣರಿದ್ದಾರೆ. ಸತ್ಯದ ತಳಹದಿಯ ಮೇಲೆ ಸೈದ್ಧಾಂತಿಕ ನಿಲುವು ಗಟ್ಟಿಗೊಳ್ಳಬೇಕಾಗಿದೆ. ವಿಜ್ಞಾನ ಮತ್ತು ತಂತ್ರಜ್ಞಾನ ಬೆಳೆದಂತೆ ಮನುಷ್ಯನ ಭಾವನೆಗಳು ಬೆಳೆಯಲಾರದ್ದಕ್ಕೆ ಅನೇಕ ಆಂತರಿಕ ನೋವುಗಳನ್ನು ಅನುಭವಿಸಬೇಕಾಗಿದೆ ಎಂದ ಶ್ರೀಗಳು, ತುಮಕೂರಿನ ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಟ್ರಸ್ಟ್ ಉತ್ತಮ ಕಾರ್ಯ ಕೈಗೊಂಡು ಜನ ಸಮುದಾಯದಲ್ಲಿ ಧರ್ಮ ಶ್ರದ್ಧೆ ಬೆಳೆಸುತ್ತಿರುವುದಕ್ಕೆ ತಮ್ಮ ಹರುಷ ವ್ಯಕ್ತಪಡಿಸಿದರು.

ವಿನಯ ಬಿದಿರೆ ಅವರು ಧರ್ಮ ಮತ್ತು ರಾಷ್ಟ್ರ ಭಕ್ತಿ ಕುರಿತು ಉಪನ್ಯಾಸ ನೀಡಿದರು. ಹೆಚ್.ಎನ್. ಚಂದ್ರಶೇಖರ್, ವಿ.ಎಸ್. ಶಶಿಧರ್, ಟಿ.ಎ. ದಕ್ಷಿಣಾಮೂರ್ತಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ನವೀನ ನಾಯಕ, ತೋಂಟಾರಾಧ್ಯ,

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮಾತನಾಡಿ, ವಿಜ್ಞಾನ, ನಾಗರಿಕತೆ ಮತ್ತು ರಾಜಕೀಯ ಸಬಲ ಸಂಘರ್ಷದಲ್ಲಿ ಧರ್ಮ ಸಂಸ್ಕೃತಿ ನಾಶಗೊಳ್ಳಬಾರದು. ನೀತಿಯಿಲ್ಲದ ಶಿಕ್ಷಣ, ಭೀತಿ ಇಲ್ಲದ ಶಾಸನ, ಮಿತಿಯಿಲ್ಲದ ಜೀವನ, ಸೀಮಾತೀತವಾದ ಸ್ವಾತಂತ್ರ್ಯ ಇವು ರಾಷ್ಟ್ರ ವಿಘಾತಕಗಳೆಂಬ ಲಿಂ.ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳ ವಾಣಿಯನ್ನು ನಾವೆಲ್ಲರೂ ಗಮನಿಸಬೇಕಾಗಿದೆ. ಸಕಲ ಜೀವಾತ್ಮರಿಗೆ ಒಳಿತನ್ನೇ ಬಯಸಿದ ಶ್ರೇಯಸ್ಸು ವೀರಶೈವ ಲಿಂಗಾಯತ ಧರ್ಮಕ್ಕೆ ಇದೆ ಎಂದ ಅವರು, ರಾಜಕೀಯದಲ್ಲಿ ಧರ್ಮ ಇರಬೇಕು. ಆದರೆ ಧರ್ಮದಲ್ಲಿ ಯಾವತ್ತೂ ರಾಜಕೀಯ ಬೆರೆಸಬಾರದೆಂದರು.

ಬಿ.ಹೆಚ್. ಪಂಚಾಕ್ಷರಯ್ಯ, ಗುರು ರೇಣುಕಾರಾಧ್ಯರು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು.

ದೊಡ್ಡಗುಣಿ ಹಿರೇಮಠದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಉಪದೇಶಾಮೃತವನ್ನಿತ್ತರು. ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಸಮಾರಂಭದ ನೇತೃತ್ವವನ್ನು ವಹಿಸಿ ಮಾತನಾಡಿದರು. ಟಿ.ಆರ್. ಸದಾಶಿವಯ್ಯ ಸ್ವಾಗತಿಸಿದರು. ಟಿ.ಎಸ್. ಕರುಣಾರಾಧ್ಯರು ನಿರೂಪಿಸಿದರು. ರಶ್ಮಿ ಮತ್ತು ಮಧು ಕುಟುಂಬ ವರ್ಗದವರು ಪೂಜಾ ಸೇವೆ ಸಲ್ಲಿಸಿದರು.

ಧನುರ್ಮಾಸದ ಅಂಗವಾಗಿ ಬೆಳಿಗ್ಗೆ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಭಕ್ತರಿಗೆ ಶುಭ ಹಾರೈಸಿದರು. ಸಮಾರಂಭದ ನಂತರ ಅನ್ನ ದಾಸೋಹ ಜರುಗಿತು.

## ಅಟಲ್‌ಜೀ ಜನಮಾನಸದಲ್ಲಿ ಅಜರಾಮರ




■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು ಕಾರ್ಯಕರ್ತರ ಮೇಲೆ ಸದಾ ನಂಬಿಕೆ ಇಟ್ಟು ಕಾರ್ಯಕರ್ತರೇ ಪಕ್ಷದ ಜೀವಾಳ ಎಂಬ ಸಿದ್ಧಾಂತಕ್ಕೆ ಬದ್ಧರಾಗಿದ್ದರು ಎಂದು ಶಿರಹಟ್ಟಿ ಬಿಜೆಪಿ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ ಹೇಳಿದರು.

ಅವರು ಶಿರಹಟ್ಟಿಯ ಶಾಸಕರ ಕಾರ್ಯಾಲಯದಲ್ಲಿ ವಾಜಪೇಯಿ ಅವರ 101ನೇ ಜನ್ಮದಿನಾಚರಣೆ ನಿಮಿತ್ತ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ನಾಲ್ಕು ದಶಕಗಳಿಗೂ ಹೆಚ್ಚು ಕಾಲ ರಾಜಕೀಯ ಬದುಕು ಕಳೆದಿರುವ ಅವರು ಲೋಕಸಭೆಗೆ ಒಂಭತ್ತು ಬಾರಿ ಹಾಗೂ ರಾಜ್ಯಸಭೆಗೆ ಎರಡು ಬಾರಿ ಆಯ್ಕೆಯಾಗಿ ದಾಖಲೆ ನಿರ್ಮಿಸಿದ್ದಾರೆ. ಜನಸಂಘ ಕಾಲದಿಂದಲೂ ರಾಜಕೀಯದಲ್ಲಿದ್ದು, ಸಾರ್ವಜನಿಕವಾಗಿ ಯವುದೇ ಕಪ್ಪುಚುಕ್ಕೆ ಇಲ್ಲದೇ ಸೇವೆ ಸಲ್ಲಿಸಿ ಜನಮಾನಸದಲ್ಲಿ ನೆನಪಾಗಿ ಉಳಿದಿರುವ ದೇಶಕಂಡ ಧೀಮಂತ ನಾಯಕ ಅಟಲ್‌ಜೀ. ಅವರ ಆದರ್ಶ ನಮಗೆಲ್ಲರಿಗೂ ಸ್ಫೂರ್ತಿಯಾಗಿದೆ ಎಂದರು.

ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಫಕ್ಕೀರೇಶ ರಟ್ಟಿಹಳ್ಳಿ, ನಂದಾ ಪಲ್ಲೇದ, ರಾಮಣ್ಣ ಕಂಬಳಿ, ಬಸವರಾಜ ವಡವಿ, ಸಂತೋಷ ತೊಡೇಕಾರ, ಮಲ್ಲು ಕಬಾಡಿ, ಜಗದೀಶ ತೇಲಿ, ಪರಶುರಾಮ್ ಡೊಂಕಬಳ್ಳಿ, ವಿನೋದ ಕಪ್ಪತ್ತನವರ, ಮಹೇಶ ಕಲ್ಲಪ್ಪನವರ, ಪ್ರಕಾಶ ಬಾರಬರ್, ಪ್ರಕಾಶ ಶೇಳಕೆ, ವೀರು ಪಾಟೀಲ, ಶಾಂತವೀರಯ್ಯ ಮಠಪತಿ, ಮಂಜುನಾಥ ಸೊಂಟನೂರ್ ಮುಂತಾದವರು ಉಪಸ್ಥಿತರಿದ್ದರು.

## ರೈಲು ಪ್ರಯಾಣ ದರ ಹೆಚ್ಚಳವನ್ನು ರಾಜ್ಯದ ಬಿಜೆಪಿ ನಾಯಕರು ಪ್ರಶ್ನಿಸುವುದಿಲ್ಲ



■ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ಕೇಂದ್ರ ಸರ್ಕಾರ ರೈಲ್ವೆ ಪ್ರಯಾಣ ದರ ಏರಿಕೆ ಮಾಡಿದೆ. ಜನಸಾಮಾನ್ಯರ ಮೇಲೆ ದರ ಏರಿಕೆ ಹೊರೆಯಾಗುತ್ತಿರುವ ಬಗ್ಗೆ ರಾಜ್ಯದ ಬಿಜೆಪಿ ನಾಯಕರು ಪ್ರಶ್ನಿಸುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಅವರು ಶುಕ್ರವಾರ ದಾವಣಗೆರೆಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡುತ್ತಾ, ಕೇಂದ್ರ ಸರ್ಕಾರ ರೈಲು ಪ್ರಯಾಣ ದರ ಏರಿಕೆ ಮಾಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿದರು.

ಚಿತ್ರದುರ್ಗದ ಹಿರಿಯೂರು ಬಳಿ ನಡೆದ ಬಸ್ ಮತ್ತು ಟ್ರಕ್ ಅಪಘಾತದ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸುತ್ತಾ, ಈ ಅಪಘಾತದಲ್ಲಿ ಟ್ರಕ್ ಚಾಲನ ತಪ್ಪಿರುವುದಾಗಿ ಮೇಲ್ನೋಟಕ್ಕೆ ಕಂಡು ಬರುತ್ತಿರುವುದಾಗಿ ಪೊಲೀಸರು ತಿಳಿಸಿದ್ದಾರೆ. ವಿರುದ್ಧ ದಿಕ್ಕಿನಲ್ಲಿ ಬರುತ್ತಿದ್ದ ಟ್ರಕ್ ವಿಭಜಕವನ್ನು ದಾಟಿ ಬಸ್‌ಗೆ ಡಿಕ್ಕಿ ಹೊಡೆದಿದೆ. ಅಪಘಾತದಲ್ಲಿ 4 ಮಹಿಳೆಯರು, ಒಂದು ಮಗು ಹಾಗೂ ಟ್ರಕ್ ಚಾಲಕ ಸಾವಿಗೀಡಾಗಿದ್ದಾರೆ. ಬಸ್ಸುಗಳು ಎಲ್ಲಾ ಸುರಕ್ಷತೆಯ ಕ್ರಮಗಳನ್ನು ಅನುಸರಿಸುವುದು ಅವಶ್ಯಕ. ಅಪಘಾತದ ಬಗ್ಗೆ ತನಿಖೆ ನಡೆಸಲಾಗುವುದು ಎಂದರು.



ನರೇಗಲ್ಲ ಪಟ್ಟಣದ ಸರ್ಕಾರಿ ಕನ್ನಡ ಹೆಣ್ಣುಮಕ್ಕಳ ಶಾಲೆ ಹಾಗೂ ಮಾದರಿ ಕೇಂದ್ರ ಶಾಲೆಯಲ್ಲಿ ಕೂಡಲಸಂಗಮದ ಜಯಮೃತ್ಯುಂಜಯ ಸ್ವಾಮೀಜಿಗಳ ಜನ್ಮದಿನದ ನಿಮಿತ್ತ ಶಾಲಾ ಮಕ್ಕಳಿಗೆ ಸಿಹಿ ವಿತರಿಸಲಾಯಿತು. ಎಸ್‌ಡಿಎಂಸಿ ಅಧ್ಯಕ್ಷರಾದ ಆನಂದ ಕೊಟಗಿ, ತಿಮರಡ್ಡಿ ಬಂಡಿವಡ್ಡರ, ಮುಖ್ಯ ಶಿಕ್ಷಕ ಬಸವರಾಜ ಕುರಿ, ಲಲಿತಾ ಮ್ಯಾಗೇರಿ, ಪಂಚಮಸಾಲಿ ಸಮಾಜದ ಅಶೋಕ ಬೇವಿನಕಟ್ಟಿ, ರುದ್ರೇಶ ಕೊಟಗಿ, ನಾಗೇಶ್ ಜಿರ್ಲ, ಶಿವು ಮುಳಗುಂದ, ನಾಗನಗೌಡ ನಾಡಗೌಡ್ರ ಉಪಸ್ಥಿತರಿದ್ದರು.

### ಲಾರಿ, ಟಿಪ್ಪರ್‌ಗಳ ಬ್ಯಾಟರಿ, ಟೈರ್ ಕಳ್ಳತನ; ಚಿಂತೆಯ ಸುಳಿಯಲ್ಲಿ ಗ್ರಾಮಸ್ಥರು

# ಕಳ್ಳರ ಕೈಚಳಕಕ್ಕೆ ಬೆಚ್ಚಿದ ಜನತೆ

■ವಿಜಯಸಾಕ್ಷಿ ಸುದ್ದಿ, ಡಂಬಳ

ಡಂಬಳ ಗ್ರಾಮ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಡಿಸಂಬರ್ ತಿಂಗಳಲ್ಲಿ ಸರಣಿಯಾಗಿ ನಡೆದ ಲಾರಿ, ಟಿಪ್ಪರ್, ಟ್ರ್ಯಾಕ್ಟರ್‌ಗಳ ಬ್ಯಾಟರಿಗಳ ಕಳವು, ಬೈಕ್, ರೈತರ ಪರಿಕರಗಳ ಕಳವು ಪ್ರಕರಣಗಳು ಜನತೆಯನ್ನು ಬೆಚ್ಚಿ ಬೀಳಿಸಿದೆ.

ಘಟನೆಯಿಂದ ಗ್ರಾಮೀಣ ಭಾಗದಲ್ಲಿ ಜಮೀನುಗಳಿಗೆ ತೆರಳಲು ರೈತ ಮಹಿಳೆಯರು ಅಂಜುವ ಸ್ಥಿತಿ ಉಂಟಾಗಿದೆ. ಗ್ರಾಮಗಳಲ್ಲಿ ಯಾವಾಗ, ಎಲ್ಲಿ, ಏನಾಗುತ್ತದೆಯೋ ಎಂಬ ಭಯ ಡಂಬಳ ಗ್ರಾಮದ ಜನರನ್ನು ಆವರಿಸಿದೆ. ಮಾರಕ ಅಸ್ತ್ರಗಳನ್ನು ಹಿಡಿದುಕೊಂಡು ಬರುವ ದರೋಡೆ-ಕೋರರಿಂದ ಅಂಜಿರುವ ಜನರು ತಮ್ಮ ರಕ್ಷಣೆಗೆ ತಾವೇ ಸ್ವಯಂ




ತಂಡಗಳನ್ನು ಮಾಡಿಕೊಳ್ಳಬೇಕು ಎನ್ನುವ ಮಾತುಗಳು ಗ್ರಾಮದಲ್ಲಿ ಕೇಳಿಬರುತ್ತಿದೆ.

ಸೋಲಾರ್ ಕೆಲಸಕ್ಕೆ, ಗಾಳಿ ವಿದ್ಯುತ್ ಯಂತ್ರಗಳನ್ನು ಅಳವಡಿಸಲು ಬಂದಿರುವ ಬೇರೆ ಬೇರೆ ರಾಜ್ಯಗಳಿಂದ ಬಂದಿರುವ ಕಾರ್ಮಿಕರು ಕೆಲಸ ಮುಗಿಸಿಕೊಂಡು ತಡರಾತ್ರಿ ಮನೆಗೆ ತೆರಳುವವರನ್ನೂ ಜನ ಕಳ್ಳರೆಂದು ಅನುಮಾನಿಸತೊಡಗಿದ್ದಾರೆ. ಸಾಕು ಪ್ರಾಣಿಗಳಾದ ಕುರಿ, ಆಡು, ಆಕಳುಗಳ ಕಳ್ಳತನ ಸಾಮಾನ್ಯವಾಗಿದೆ. ಬಸ್ ನಿಲ್ದಾಣದ ಪಕ್ಕದ ಪೆಟ್ಟಿಗೆ ಅಂಗಡಿಗಳಲ್ಲಿಯೂ ಕಳ್ಳತನ ಜರುಗುತ್ತಿದ್ದು, ದರೋಡೆಕೋರರನ್ನು ಮಟ್ಟಹಾಕುವಲ್ಲಿ ಪೊಲೀಸ್ ಇಲಾಖೆ ಸಂಪೂರ್ಣ ವಿಫಲವಾಗಿದೆ ಎನ್ನುವ ಮಾತುಗಳು ಗ್ರಾಮದಲ್ಲಿ ಹರಡುತ್ತಿದೆ.

ಟ್ರ್ಯಾಕ್ಟರ್, ಟಿಪ್ಪರ್, ಲಾರಿಗಳ ಬ್ಯಾಟರಿ, ಬೊಲೆರೊ ಗಾಡಿಯ ಟೈರ್ ಕಳ್ಳತನ ಮಾಡಿರುವ ಕಳ್ಳರನ್ನು ಹಿಡಿದು ನ್ಯಾಯ ಒದಗಿಸಬೇಕು. ಗ್ರಾಮ ಪಂಚಾಯಿತಿ ಮೂಲಕ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಿ.ಸಿ ಕ್ಯಾಮರಾಗಳನ್ನು ಅಳವಡಿಸಬೇಕು ಎನ್ನುತ್ತಾರೆ ಗ್ರಾಮಸ್ಥರು.

ಈ ಬಗ್ಗೆ ಪ್ರತಿಕ್ರಿಯಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಶೀಘ್ರದಲ್ಲಿಯೇ ಕಳ್ಳರನ್ನು ಪತ್ತೆಹಚ್ಚಲಾಗುವುದು. ಜನರು ಭಯ ಬೀಳುವ ಅವಶ್ಯಕತೆ ಇಲ್ಲ. ಪೊಲೀಸ್ ಇಲಾಖೆ ಅಗತ್ಯ ಕ್ರಮಕೈಗೊಳ್ಳಲಿದೆ ಎಂದಿದ್ದಾರೆ.

ಎಂಟು ದಿನಗಳ ಹಿಂದೆ ಅನ್ನಭಾಗ್ಯ ಅಕ್ಕಿ ಲಾರಿಗಳ, ಟಿಪ್ಪರ್‌ಗಳ ಬ್ಯಾಟರಿಗಳನ್ನು ಕಳ್ಳತನ ಮಾಡಿದ್ದರು. ಸಾಲ ಮಾಡಿ ನಾನು ನಡೆಸುವ ಲಾರಿಗೆ ಹೊಸ ಬ್ಯಾಟರಿ ತಂದು ಹಾಕಿದ್ದೆ. ಇದೀಗ ಪುನಃ ಬ್ಯಾಟರಿ ಕಳ್ಳತನ ಮಾಡಿದ್ದಾರೆ. ಇದರಿಂದ ಬಹಳ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದೇನೆ. ಪೊಲೀಸರು ನನಗೆ ನ್ಯಾಯ ಒದಗಿಸಿಕೊಡಬೇಕು.


**– ಫಕೀರಪ್ಪ ತಳವಾರ.**
ಅನ್ನಭಾಗ್ಯ ಅಕ್ಕಿ ಲಾರಿ ಚಾಲಕ.

## ಭೀಕರ ರಸ್ತೆ ಅಪಘಾತ: ಇಬ್ಬರು ಸಾವು, ನಾಲ್ವರ ಸ್ಥಿತಿ ಗಂಭೀರ!

■ವಿಜಯಸಾಕ್ಷಿ ಸುದ್ದಿ, ನೆಲಮಂಗಲ

ಜಿಲ್ಲೆಯ ನೆಲಮಂಗಲ ತಾಲೂಕಿನ ತೋಟಗೆರೆ ಕ್ರಾಸ್ ನಲ್ಲಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಇಬ್ಬರು ಸಾವನ್ನಪ್ಪಿರುವ ಘಟನೆ ಜರುಗಿದೆ.

ಘಟನೆಯಲ್ಲಿ ನಾಲ್ವರ ಸ್ಥಿತಿ ಗಂಭೀರವಾಗಿದೆ. ಹರೀಶ್(39) ಮತ್ತು ವೀರಭದ್ರ(80) ಮೃತರು. ಕಾರಿನಲ್ಲಿದ್ದ ಗೌರಮ್ಮ, ಮೈತ್ರಿ, ಸಿರಿ, ವಂದನಾಗೆ ಗಂಭೀರ ಗಾಯಗಳಾಗಿದ್ದು, ನೆಲಮಂಗಲದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಘಟನಾ ಸ್ಥಳಕ್ಕೆ ಮಾದನಾಯಕನಹಳ್ಳಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಗುರುವಾರ ದಾಸರ ಹಳ್ಳಿಯಲ್ಲಿರುವ ಸ್ವಂತ ಮನೆಯಿಂದ ಕುಟುಂಬದೊಂದಿಗೆ ಹುಟ್ಟೂರು ಗೌರಿಬಿದನೂರಿಗೆ ತೆರಳಿದ್ದ ಹರೀಶ್, ಜಮೀನು ವಿಚಾರ ಮುಗಿಸಿಕೊಂಡು ಸಂಜೆ 6 ಗಂಟೆ ಸುಮಾರಿಗೆ ವಾಪಸ್ ಪ್ರಯಾಣ ಆರಂಭಿಸಿದ್ದರು. ರೈಲ್ವೆ ಗೊಲ್ಲಹಳ್ಳಿ-ಹೆಸರಘಟ್ಟ ಮಾರ್ಗವಾಗಿ



ದಾಸರಹಳ್ಳಿಗೆ ತೆರಳುವಾಗ, ತೆ-ೂಟದ ಗುಡ್ಡದಹಳ್ಳಿ ಟರ್ನಿಂಗ್ ಬಳಿ ಲಾರಿಯನ್ನು ಓವರ್‌ಟೇಕ್ ಮಾಡಲು ಯತ್ನಿಸಿದ ವೇಳೆ ಎದುರಿನಿಂದ ಬಂದ ಮತ್ತೊಂದು ಲಾರಿಗೆ ಡಿಕ್ಕಿಯಾಗುವುದನ್ನು ತಪ್ಪಿಸಲು ಕಾರನ್ನು ಬಲಭಾಗಕ್ಕೆ ತಿರುಗಿಸಿದ್ದಾರೆ. ಸಂಜೆ 7.30ರ ಹೊತ್ತಿಗೆ ಕತ್ತಲಿನಲ್ಲೇ ರಸ್ತೆ ಬದಿಯ ಮರಕ್ಕೆ ಕಾರು ಡಿಕ್ಕಿ ಹೊಡೆದ ಪರಿಣಾಮ ಹರೀಶ್ ಮತ್ತು ಅವರ ತಂದೆ ವೀರಭದ್ರ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಇನ್ನುಳಿದ ನಾಲ್ವರ ಸ್ಥಿತಿ ಗಂಭೀರವಾಗಿದ್ದು, ಸಾವು-ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದಾರೆ. ಘಟನಾ ಸ್ಥಳಕ್ಕೆ ಮಾದನಾಯಕನಹಳ್ಳಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡಿದ್ದಾರೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ನೆಲಮಂಗಲ ಶವಾಗಾರಕ್ಕೆ ರವಾನಿಸಲಾಗಿದೆ.

## ಹೊಸವರ್ಷಕ್ಕೆ ಕ್ಷಣಗಣನೆ: ಬೆಂಗಳೂರು ಕಮಿಷನರ್ ಸಿಟಿ ರೌಂಡ್ಸ್, ಪಬ್, ಬಾರ್ & ರೆಸ್ಟೋರೆಂಟ್‌ಗಳಿಗೆ ಕಟ್ಟುನಿಟ್ಟಿನ ರೂಲ್ಸ್!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಹೊಸವರ್ಷ 2026ರ ಕೌಂಟ್‌ಡೌನ್ ಆರಂಭವಾಗುತ್ತಿದ್ದಂತೆ ನಗರದಲ್ಲಿ ಭದ್ರತೆ ಕಠಿಣಗೊಂಡಿದೆ.

ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ನಗರದ ಪ್ರಮುಖ ಪ್ರದೇಶಗಳಲ್ಲಿ ರೌಂಡ್ಸ್ ಮಾಡಿ ಪರಿಶೀಲನೆ ನಡೆಸಿ, ನಂತರ ಆಯುಕ್ತರ ಕಚೇರಿಯಲ್ಲಿ ಪಬ್, ಕ್ಲಬ್ ಹಾಗೂ ರೆಸ್ಟೋರೆಂಟ್ ಮಾಲೀಕರೊಂದಿಗೆ ಮಹತ್ವದ ಸಭೆ ನಡೆಸಿದರು.

ಸಭೆಯ ಬಳಿಕ ಮಾತನಾಡಿದ ಆಯುಕ್ತರು, ನ್ಯೂ ಇಯರ್ ವೇಳೆ ಅಹಿತಕರ ಘಟನೆಗಳು ನಡೆಯದಂತೆ ಸುಮಾರು 30 ಅಂಶಗಳ ಮಾರ್ಗಸೂಚಿ ನೀಡಲಾಗಿದೆ. ಕ್ರೌಡ್ ಕಂಟ್ರೋಲ್, ಏಜ್ ಲಿಮಿಟ್, ಕಾರ್ಯಾವಧಿ, ಹೆಚ್ಚುವರಿ ಸಿಸಿಟಿವಿ ಕ್ಯಾಮೆರಾಗಳು, ಶಬ್ದ ಮಾಲಿನ್ಯ ನಿಯಂತ್ರಣ, ಮಹಿಳೆಯರ ಸುರಕ್ಷತೆ ಸೇರಿದಂತೆ ಹಲವು ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

ಬೌನ್ಸರ್‌ಗಳ ವರ್ತನೆ ಬಗ್ಗೆ ಬಂದಿರುವ ದೂರುಗಳ ಕುರಿತು ಮಾಲೀಕರಿಗೆ ಸ್ಪಷ್ಟ ಸೂಚನೆ ನೀಡಲಾಗಿದೆ.

ಎಂಟ್ರಿ-ಎಕ್ಸಿಟ್ ವ್ಯವಸ್ಥೆ, ಫೈರ್ ಸೇಫ್ಟಿ, ಪಾರ್ಕಿಂಗ್ ವ್ಯವಸ್ಥೆ, ಎಮರ್ಜೆನ್ಸಿ ಸಂಪರ್ಕ ಸಂಖ್ಯೆ ಸೇರಿದಂತೆ ಎಲ್ಲಾ ಸುರಕ್ಷತಾ ಕ್ರಮಗಳನ್ನು ಜಾರಿಗೆ ತರಲು ಸೂಚಿಸಲಾಗಿದೆ. ರೇವ್ ಪಾರ್ಟಿ ಅಥವಾ ಅಕ್ರಮ ಪಾರ್ಟಿಗಳಿಗೆ ಅವಕಾಶ ಇರಬಾರದು, ಪಟಾಕಿ ಹಾಗೂ ಆಯುಧಗಳನ್ನು ನಿಷೇಧಿಸಲಾಗಿದೆ ಎಂದು ತಿಳಿಸಿದ್ದಾರೆ.

ಜನರು ಹೋಗಿ ಬರುವ ವೇಳೆ ಸರತಿ ಸಾಲು ವ್ಯವಸ್ಥೆ ಕಡ್ಡಾಯವಾಗಿದ್ದು, ಮ್ಯಾನೇಜರ್‌ಗಳು ಹಾಗೂ ಸಿಬ್ಬಂದಿ ಮದ್ಯಪಾನ ಮಾಡಿರಬಾರದು ಎಂಬುದನ್ನೂ ಸ್ಪಷ್ಟಪಡಿಸಿದ್ದಾರೆ. ಹೆಚ್ಚು ಸಮಯ ಓಪನ್ ಮಾಡಲು ಮನವಿ ಬಂದರೂ, ರಾತ್ರಿ 1 ಗಂಟೆಗೆ ಕ್ಲೋಸ್ ಕಡ್ಡಾಯ ಎಂದು ಹೇಳಲಾಗಿದೆ. ಹೊಸವರ್ಷವನ್ನು ಜವಾಬ್ದಾರಿಯಿಂದ ಆಚರಿಸುವಂತೆ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಮನವಿ ಮಾಡಿದ್ದಾರೆ.

## ಮೈಸೂರು ಸ್ಫೋಟ ಪ್ರಕರಣ: ಮತ್ತೋರ್ವ ಮಹಿಳೆ ಸಾವು, ಮೃತರ ಸಂಖ್ಯೆ ಮೂರಕ್ಕೆ ಏರಿಕೆ!

■ವಿಜಯಸಾಕ್ಷಿ ಸುದ್ದಿ, ಮೈಸೂರು

ಮೈಸೂರು ಅರಮನೆ ಬಳಿ ನಡೆದ ಹೀಲಿಯಂ ಸಿಲಿಂಡರ್ ಸ್ಫೋಟ ಪ್ರಕರಣದಲ್ಲಿ ಮೃತರ ಸಂಖ್ಯೆ ಮೂರಕ್ಕೆ ಏರಿಕೆಯಾಗಿದೆ.

ಕೆ.ಆರ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಬೆಂಗಳೂರು ಮೂಲದ ಲಕ್ಷ್ಮೀ ಅವರು ಚಿಕಿತ್ಸೆ ಫಲಿಸದೇ ಸಾವನ್ನಪ್ಪಿದ್ದಾರೆ. ಲಕ್ಷ್ಮೀ ಅವರು ಕುಟುಂಬದವರೊಂದಿಗೆ ಮೈಸೂರು ಪ್ರವಾಸಕ್ಕೆ ಬಂದಿದ್ದ ವೇಳೆ ಈ ದುರ್ಘಟನೆ ಸಂಭವಿಸಿತ್ತು. ಘಟನೆಯಲ್ಲಿ ಲಕ್ಷ್ಮೀ ಅವರ ಪುತ್ರಿ ಡಿಂಪಲ್ ಬದುಕುಳಿದಿದ್ದು, ತಾಯಿ ಸಾವಿನ ಸುದ್ದಿ ತಿಳಿದು ಕಣ್ಣೀರಿಟ್ಟಿದ್ದಾರೆ.

ಕ್ರಿಸ್‌ಮಸ್ ರಜೆ ಹಿನ್ನೆಲೆಯಲ್ಲಿ



ಮೈಸೂರಿಗೆ ಪ್ರವಾಸಿಗರ ಸಂಖ್ಯೆ ಹೆಚ್ಚಾಗಿದ್ದ ಸಮಯದಲ್ಲೇ ಈ ಘಟನೆ ನಡೆದಿದೆ. ಗುರುವಾರ ರಾತ್ರಿ ಸುಮಾರು 8.30ರ ವೇಳೆಗೆ ಉತ್ತರ ಪ್ರದೇಶ ಮೂಲದ ಸಲೀಂ ಎಂಬವರು ಅರಮನೆಯ ಜಯಮಾರ್ತಾಂಡ ದ್ವಾರದ ಬಳಿ ಹೀಲಿಯಂ ಬಲೂನ್ ಮಾರಾಟ ಮಾಡುತ್ತಿದ್ದರು. ಬಲೂನ್‌ಗೆ ಗ್ಯಾಸ್ ತುಂಬಿಸುವ ವೇಳೆ ಏಕಾಏಕಿ ಸಿಲಿಂಡರ್ ಸ್ಫೋಟಗೊಂಡು, ಸಲೀಂ ಸ್ಥಳದಲ್ಲೇ ಪ್ರಾಣ ಬಿಟ್ಟಿದ್ದಾರೆ.

ಸ್ಫೋಟದಲ್ಲಿ ನಾಲ್ಕೈದು ಮಂದಿ ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದರು.

ಸ್ಫೋಟದ ತೀವ್ರತೆಗೆ ಸಲೀಂ ಸ್ಥಳದಲ್ಲೇ ಮೃತಪಟ್ಟರೆ, ಗಾಯಗೊಂಡವರಲ್ಲಿ ನಂಜನಗೂಡಿನ ಮಂಜುಳ ಅವರು ಇಂದು ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೇ ಸಾವನ್ನಪ್ಪಿದ್ದಾರೆ. ಮಂಜುಳ ಅವರು ಮೈಸೂರಿನಲ್ಲಿ ಹೂವಿನ ವ್ಯಾಪಾರ ಮಾಡುತ್ತಿದ್ದು, ವ್ಯಾಪಾರ ಮುಗಿಸಿಕೊಂಡು ಬಸ್ ಹತ್ತಲು ತೆರಳುತ್ತಿದ್ದ ವೇಳೆ ಈ ದುರಂತಕ್ಕೆ ಬಲಿಯಾಗಿದ್ದಾರೆ.

ಮೃತ ಸಲೀಂ ಅವರು ಕೇವಲ 15 ದಿನಗಳ ಹಿಂದಷ್ಟೇ ಮೈಸೂರಿಗೆ ಆಗಮಿಸಿ, ಲಷ್ಕರ್ ಮೊಹಲ್ಲಾದ ಶರೀಫ್ ಲಾಡ್ಜ್‌ನಲ್ಲಿ ವಾಸವಾಗಿದ್ದರು. ಮೂವರು ಸ್ನೇಹಿತರೊಂದಿಗೆ ಬಲೂನ್ ಮಾರಾಟ ಮಾಡುತ್ತಿದ್ದರೂ, ಘಟನೆ ನಡೆದ ರಾತ್ರಿ ಸಲೀಂ ಒಬ್ಬರೇ ಮಾರಾಟ ಮಾಡುತ್ತಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ. ಕ್ರಿಸ್‌ಮಸ್ ಸಮಯದಲ್ಲೇ ಈ ಸ್ಫೋಟ ಸಂಭವಿಸಿದ್ದರಿಂದ ಎನ್‌ಐಎಗೂ ಮಾಹಿತಿ ನೀಡಲಾಗಿದೆ. ಸಲೀಂ ಜೊತೆಯಲ್ಲಿದ್ದ ಇಬ್ಬರನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

## ಫಾಕ್ಸ್‌ಕಾನ್ ಹೂಡಿಕೆಗಳೇ ಮೇಕ್ ಇನ್ ಇಂಡಿಯಾ ಯಶಸ್ಸಿನ ಸಾಕ್ಷಿ: ಪ್ರಲ್ಹಾದ್ ಜೋಶಿ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪ್ರಧಾನಿ ನರೇಂದ್ರ ಮೋದಿ ಅವರ 'ಮೇಕ್ ಇನ್ ಇಂಡಿಯಾ' ಯೋಜನೆಯನ್ನು ಕುರಿತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಟೀಕಿಸಿರುವುದಕ್ಕೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತೀವ್ರ ಪ್ರತಿಕ್ರಿಯೆ ನೀಡಿದ್ದಾರೆ.

ಈ ಸಂಬಂಧ ಮಾತನಾಡಿದ ಅವರು, ಕಾಂಗ್ರೆಸ್ ನಾಯಕರು ವಾಸ್ತವವನ್ನು ಒಪ್ಪಿಕೊಳ್ಳಬೇಕಾಗಿದೆ ಎಂದು ಕಿಡಿಕಾರಿದ್ದಾರೆ. ಮೇಕ್ ಇನ್ ಇಂಡಿಯಾ ಯೋಜನೆಯಡಿ ದೇಶದಲ್ಲಿ ಫಾಕ್ಸ್‌ಕಾನ್‌ನಂತಹ ಜಾಗತಿಕ ಮಟ್ಟದ ಕಂಪನಿಗಳು ಹೂಡಿಕೆ ಮಾಡುತ್ತಿರುವುದು ಯೋಜನೆಯ ಯಶಸ್ಸಿಗೆ ಸ್ಪಷ್ಟ ಸಾಕ್ಷಿ ಎಂದರು.

ಕರ್ನಾಟಕದಲ್ಲಿ ಫಾಕ್ಸ್‌ಕಾನ್ ಘಟಕ ಸ್ಥಾಪನೆಗಾಗಿ ಭೂಮಿ ಹಂಚಿಕೆಯಾಗಿದ್ದದ್ದು ಬಿಜೆಪಿ ಸರ್ಕಾರದ ಅವಧಿಯಲ್ಲೇ ನಡೆದಿದ್ದು, ಈ ಸತ್ಯವನ್ನು ಕಾಂಗ್ರೆಸ್ ಮರೆತಿದೆ. ಪ್ರಧಾನಿ ಮೋದಿ ಪರಿಚಯಿಸಿದ ಪಿಎಲ್‌ಐ (PLI) ಯೋಜನೆಯ ನೇರ ಲಾಭ ಪಡೆದಿರುವ ಕಂಪನಿಗಳಲ್ಲಿ ಫಾಕ್ಸ್‌ಕಾನ್ ಪ್ರಮುಖವಾಗಿದೆ. ಈ ಯೋಜನೆಯಡಿ 14,065 ಕೋಟಿ ರೂ. ಹೂಡಿಕೆ ಆಕರ್ಷಿಸಲ್ಪಟ್ಟಿದ್ದು, ಅಕ್ಟೋಬರ್ 2025ರ ವೇಳೆಗೆ 1.32 ಲಕ್ಷ ಉದ್ಯೋಗಗಳು ಸೃಷ್ಟಿಯಾಗಿವೆ ಎಂದು ಜೋಶಿ ತಿಳಿಸಿದ್ದಾರೆ.

ಭಾರತ ಈಗ ದೇಶೀಯವಾಗಿ ಚಿಪ್‌ಗಳು, ಎಲೆಕ್ಟ್ರಾನಿಕ್ ಘಟಕಗಳು ಮತ್ತು ಉಪ-ಮಾಡ್ಯೂಲ್‌ಗಳ ಉತ್ಪಾದನೆಯಲ್ಲಿ ಮುನ್ನಡೆ ಸಾಧಿಸುತ್ತಿದೆ. 2014-15ರಲ್ಲಿ ಕೇವಲ 0.18 ಲಕ್ಷ ಕೋಟಿ ರೂ. ಇದ್ದ ಮೊಬೈಲ್ ಫೋನ್ ಉತ್ಪಾದನೆ ಇಂದು 5.5 ಲಕ್ಷ ಕೋಟಿ ರೂ.ಗೆ ಏರಿದ್ದು, ಇದು 28 ಪಟ್ಟು ಹೆಚ್ಚಳವಾಗಿದೆ. ರಫ್ತು ಕೂಡ 0.01 ಲಕ್ಷ ಕೋಟಿ ರೂ.ನಿಂದ 2 ಲಕ್ಷ ಕೋಟಿ ರೂ.ಗೆ ಬೆಳೆಯಿದ್ದು, 127 ಪಟ್ಟು ಏರಿಕೆಯಾಗಿದೆ ಎಂದು ಅವರು ವಿವರಿಸಿದ್ದಾರೆ.

### ಇಂಡೋರ್ ಸ್ಟೇಡಿಯಂ ಬಡಾವಣೆಯ ಸಿ.ಸಿ ಒಳಚರಂಡಿ ಕಾಮಗಾರಿಗೆ ಸಚಿವ ಎಚ್.ಕೆ. ಪಾಟೀಲ ಚಾಲನೆ

# ಅಭಿವೃದ್ಧಿ ಕಾರ್ಯಕ್ಕೆ ಸಂಘಟನೆಗಳು ಕೈಜೋಡಿಸಲಿ

■ವಿಜಯಸಾಕ್ಷಿ ಸುದ್ದಿ, ಗದಗ



ಸರ್ಕಾರ ಕೈಗೊಳ್ಳುವ ಅಭಿವೃದ್ಧಿ ಹಾಗೂ ಸಮಾಜಮುಖಿ ಕಾರ್ಯಗಳಿಗೆ ಸಾಮಾಜಿಕ ಸಂಘಟನೆಗಳು ಕೈಜೋಡಿಸಿದಲ್ಲಿ ಆ ಕಾರ್ಯಗಳು ಯಶಸ್ವಿಗೊಳ್ಳುವವು ಎಂಬುದಕ್ಕೆ ಗದುಗಿನ ಇಂಡೋರ್ ಸ್ಟೇಡಿಯಂ ಬಡಾವಣೆ ನಾಗರಿಕರ ವಿವಿಧೋದ್ದೇಶಗಳ ಸಂಘವೇ ಉದಾಹರಣೆಯಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಅವರು ಗುರುವಾರ ಗದುಗಿನ ನಂದೀಶ್ವರ ನಗರದ ಇಂಡೋರ್ ಸ್ಟೇಡಿಯಂ ಬಡಾವಣೆ ನಾಗರಿಕರ ವಿವಿಧೋದ್ದೇಶಗಳ ಸಂಘ ಕಳಸಾಪೂರ, ಪಂಚವಟಿ ನಾಗರಕಟ್ಟೆ ಹತ್ತಿರ ಗದಗ ನಗರಸಭೆಯ ವಾರ್ಡ್ ನಂ. 34ರಲ್ಲಿ ಸಿ.ಸಿ ರಸ್ತೆ ಒಳಚರಂಡಿ ಕಾಮಗಾರಿ ಭೂಮಿಪೂಜೆ ನೆರವೇರಿಸಿ ನಂತರ ಜರುಗಿದ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದರು.

ಇಂಡೋರ್ ಸ್ಟೇಡಿಯಂ ಬಡಾವಣೆಯ ಉದ್ಯಾನವನದ ಕಾಮಗಾರಿ ಈಗಾಗಲೇ ಆರಂಭವಾಗಿದೆ. ಕಾರಣ ನಗರದ ಸರ್ವ ಪದಾಧಿಕಾರಿಗಳು ಪಂಚವಟಿ ನಾಗರಕಟ್ಟೆ ಉದ್ಯಾನವನ ಗದಗ ನಗರದಲ್ಲಿಯೇ ಮಾದರಿಯಾಗಿ ನಿರ್ಮಾಣ ಮಾಡಲು ನಗರಸಭೆಯೊಂದಿಗೆ ಕೈಜೋಡಿಸಿ ಕಾಮಗಾರಿ ಮಾಡಿಸಿಕೊಳ್ಳಲು ಹೇಳಿದರು.

ನಂದೀಶ್ವರ ನಗರದ ಇಂಡೋರ್ ಸ್ಟೇಡಿಯಂ ಬಡಾವಣೆ ನಾಗರಿಕರ ವಿವಿಧೋದ್ದೇಶಗಳ ಸಂಘದ ಅಧ್ಯಕ್ಷ ವಿಶ್ವನಾಥರೆಡ್ಡಿ ಗದ್ದಿಕೇರಿ ಮಾತನಾಡಿ, ನಮ್ಮ ಸಂಘದ ಉದ್ಘಾಟನೆಯ ಸಂದರ್ಭದಲ್ಲಿ ಸಚಿವರು ಹೇಳಿದಂತೆ ಇಂಡೋರ್ ಸ್ಟೇಡಿಯಂ ಬಡಾವಣೆಯ ಪ್ರಮುಖ ಎರಡು ಬೇಡಿಕೆಗಳನ್ನು ಈಡೇರಿಸಿದ ನಂತರವೇ ಸಂಘದ ನಾಗರಿಕರ ಸನ್ಮಾನ ಸ್ವೀಕರಿಸುವುದಾಗಿ ಹೇಳಿದ್ದರು. ಅದರಂತೆ ಎರಡು ಕಾಮಗಾರಿಗಳನ್ನು ಕೈಗೊಂಡಿದ್ದು, ಅವರು ನಮ್ಮೆಲ್ಲರ ಅಭಿಮಾನದ ದ್ಯೋತಕವಾಗಿ ಸನ್ಮಾನ ಸ್ವೀಕರಿಸಿದ್ದು ಸಂಘಕ್ಕೆ ಹಾಗೂ ಬಡಾವಣೆಯ ನಾಗರಿಕರಿಗೆ ಸಂತೋಷವನ್ನುಂಟುಮಾಡಿದೆ ಎಂದರು.

> ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವ್ಹಿ. ಸಂಕನೂರ ಮಾತನಾಡಿ, ಈ ಬಡಾವಣೆಯಲ್ಲಿ ವಿದ್ಯಾವಂತರು, ಸರ್ಕಾರಿ ನೌಕರರು, ಪ್ರಜ್ಞಾವಂತರು ಹೆಚ್ಚಾಗಿ ವಾಸವಾಗಿದ್ದು, ಇವರೆಲ್ಲರೂ ಸಂಘಟಿತರಾಗಿ ಒಂದು ಸಂಘಟನೆಯ ಮೂಲಕ ಸಮಾಜಮುಖಿ, ಜನಮುಖಿ ಕಾರ್ಯ ಕೈಗೊಂಡಿರುವದು ಅಭಿನಂದನೀಯ. ಈ ಎಲ್ಲ ಪದಾಧಿಕಾರಿಗಳು ಸಂಘಟನೆಯನ್ನು ಬಲಪಡಿಸುವ ಮೂಲಕ ಜನಪರ ಕಾರ್ಯಗಳನ್ನು ಬೆಂಬಲಿಸಬೇಕು ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ನಗರಸಭಾ ಸದಸ್ಯರಾದ ವಿದ್ಯಾವತಿ ಗಡಗಿ ವಹಿಸಿದ್ದರು. ಗದಗ ತಾಲುಕಾ ಪಂಚ ಗ್ಯಾರಂಟಿ ಯೋಜನೆಯ ಅಧ್ಯಕ್ಷ ಅಶೋಕ್ ಮಂದಾಲಿ, ನಗರಸಭೆಯ ಮುಖ್ಯ ಅಭಿಯಂತರ ಲಕ್ಷ್ಮಣ ಜೋಗದಂಡಕರ, ಸಂಘದ ಉಪಾಧ್ಯಕ್ಷ ಶಿವಾನಂದ ಪಲ್ಲೇದ, ಡಾ. ಡಿ.ಬಿ. ಚೆನ್ನಶೆಟ್ಟರ, ಜಗದೀಶ್, ವೀರಯ್ಯ ಹಿರೇಮಠ, ವಿ.ಎಸ್. ಶಿವಕಾಳಿಮಠ, ರಾಚಯ್ಯ ಕರವೀರಮಠ, ಅಮರನಾಥ ಗಡಗಿ, ಎಸ್.ವೈ. ಯಾಳಗಿಶೆಟ್ರು, ಡಾ. ರವಿ, ನಂದಿ, ಬಸವರಾಜ ಬೇಲೇರಿ, ಮಂಜುನಾಥ ಗಜಾಕೊಶ, ಶ್ರೀನಿವಾಸ, ಬಸವಂತಪ್ಪ ಕವಲೂರ, ಹಬೀಬ, ಡಿ.ಎಸ್. ಕಮತರ, ಮಂಜುನಾಥ ಚಿಕ್ಕನಗೌಡ್ರ, ಸಿದ್ದರಾಮೇಶ ಹಿರೇಮಠ, ಅನಿಲ್ ಗೌಳಿ, ಸುಭಾಸ್ ಗಡಾದ, ಶಿವಕುಮಾರ ರಾಠೋಡ, ಹೊಳೆಯಪ್ಪಗೌಡ ಪಾಟೀಲ, ನಿಂಗರಾಜ ಗೊಲ್ಲರ, ಸಿದ್ದರಾಮೇಶ ಹಿರೇಮಠ, ನೀಲಕಂಠಯ್ಯ ಕಳ್ಳಿಮಠ ಸೇರಿದಂತೆ ನಗರದ ಸಮಸ್ತ ನಾಗರಿಕರು ಭಾಗವಹಿಸಿದ್ದರು.

ಸಂಘದ ಪ್ರಧಾನ ಕಾರ್ಯದರ್ಶಿ ಬಸವರಾಜ ಹೆಚ್.ಕೊರ್ಲಹಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ರವೀಂದ್ರ ನಂದಿ ಸ್ವಾಗತಿಸಿದರು. ಸಂಘದ ಸಂಘಟನಾ ಕಾರ್ಯದರ್ಶಿ ಅಶೋಕ ಮಾಳೆಕೊಪ್ಪ ವಂದಿಸಿದರು.

### ವೈಟ್ ಲೆದರ್ ಬಾಲ್ ಪ್ರೀಮಿಯಂ ಲೀಗ್ | ವಿಜೇತ ತಂಡಕ್ಕೆ ಪ್ರಶಸ್ತಿ ವಿತರಿಸಿದ ಮಿಥುನ್ ಪಾಟೀಲ

# ಕ್ರೀಡೆಗಳು ಆರೋಗ್ಯಕರ ಸಮಾಜದ ಅವಿಭಾಜ್ಯ ಅಂಗ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಬಾಗಮಾರ ಮೆಡಿಕಲ್ ಕಾಲೇಜು ಆವರಣದಲ್ಲಿ ಬೃಂದಾವನ ಎಂಟರ್‌ಪ್ರೈಸಸ್ ಅರ್ಪಿಸುವ ಗಜೇಂದ್ರಗಡ ಸ್ಪೋರ್ಟ್ಸ್ ಕ್ಲಬ್ ವತಿಯಿಂದ ಆಯೋಜಿಸಲಾದ ವೈಟ್ ಲೆದರ್ ಬಾಲ್ ಮುಕ್ತ ಪ್ರೀಮಿಯಂ ಲೀಗ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ವಿಜೇತ ತಂಡಕ್ಕೆ ಕಾಂಗ್ರೆಸ್ ಯುವ ಮುಖಂಡ ಮಿಥುನ್ ಪಾಟೀಲ ಪ್ರಶಸ್ತಿ ವಿತರಿಸಿದರು.

ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಮಿಥುನ್ ಪಾಟೀಲ, ಇಂತಹ ಟೂರ್ನಿಗಳು ಗ್ರಾಮೀಣ ಮತ್ತು ಪಟ್ಟಣ ಮಟ್ಟದ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸುವುದರ ಜೊತೆಗೆ ಯುವಕರಲ್ಲಿ ಶಿಸ್ತು, ಸಹಕಾರ ಮತ್ತು ನಾಯಕತ್ವ ಗುಣಗಳನ್ನು ಬೆಳೆಸುತ್ತವೆ. ಕ್ರೀಡೆಗಳು ಆರೋಗ್ಯಕರ ಸಮಾಜ ನಿರ್ಮಾಣದ ಅವಿಭಾಜ್ಯ ಅಂಗವಾಗಿದ್ದು, ಯುವಶಕ್ತಿಯನ್ನು ಸಕಾರಾತ್ಮಕ ದಿಕ್ಕಿನಲ್ಲಿ ಮುನ್ನಡೆಸುವ ಶಕ್ತಿ ಹೊಂದಿವೆ ಎಂದು ಅಭಿಪ್ರಾಯಪಟ್ಟರು.

> ಅಂತಿಮ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಗಜೇಂದ್ರಗಡ ಪ್ಯಾಂಥರ್ಸ್ ತಂಡ 20 ಓವರ್‌ಗಳಲ್ಲಿ 179 ರನ್ ಗಳಿಸಿತು. ಗುರಿಯನ್ನು ಬೆನ್ನಟ್ಟಿದ ಗಜೇಂದ್ರಗಡ ಟೈಗರ್ಸ್ 123 ರನ್‌ಗಳಿಗೆ ಆಲೌಟ್ ಆಯಿತು. ಗಜೇಂದ್ರಗಡ ಪ್ಯಾಂಥರ್ಸ್ 56 ರನ್‌ಗಳ ಗೆಲುವು ಸಾಧಿಸುವ ಮೂಲಕ ಪ್ರೇಕ್ಷಕರಿಗೆ ರೋಚಕ ಅನುಭವ ನೀಡಿತು.

ರಾಜು ಸಾಂಗ್ಲಿಕರ್ ಮಾತನಾಡಿ, ಕ್ರೀಡೆಯಲ್ಲಿ ಭಾಗವಹಿಸುವುದರಿಂದ ದೈಹಿಕ ಮತ್ತು ಮಾನಸಿಕ ಸಾಮರ್ಥ್ಯ ಹೆಚ್ಚಾಗುತ್ತದೆ. ಪ್ರತಿಯೊಂದು ಕ್ರೀಡೆಯಲ್ಲಿ ನಮ್ಮನ್ನು ನಾವು ತೊಡಗಿಸಿಕೊಂಡಾಗ ನಾವು ನಮ್ಮನ್ನೇ ಮರೆತುಬಿಡುವಷ್ಟು ಉತ್ಸಾಹ, ಸಂತೋಷ ಮೂಡುತ್ತದೆ ಎಂದರು.

ಈ ಸಂದರ್ಭದಲ್ಲಿ ಬಾಗಮಾರ ಸೇವಾ ಸಮಿತಿ ಕಾರ್ಯದರ್ಶಿ ಅಜಿತ ಬಾಗಮಾರ, ರಾಜು ಸಾಂಗ್ಲಿಕರ್, ಖಾಜಾಹುಸೇನ ಸರ್ಕಾವಸ್, ಶಿವು ಮಾಳವತ್ತ, ಹರ್ಷ, ಅಭಿ, ಶರಣು, ಪವನ್ ಸೇರಿದಂತೆ ಗಜೇಂದ್ರಗಡ ಸ್ಪೋರ್ಟ್ಸ್ ಕ್ಲಬ್‌ನ ಪದಾಧಿಕಾರಿಗಳು, ಕ್ರೀಡಾಪಟುಗಳು ಮತ್ತು ಕ್ರೀಡಾಭಿಮಾನಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದ ಅಂತ್ಯದಲ್ಲಿ ವಿಜೇತ ಹಾಗೂ ರನ್ನರ್‌ಅಪ್ ತಂಡಗಳಿಗೆ ಟ್ರೋಫಿ ಹಾಗೂ ಬಹುಮಾನಗಳನ್ನು ವಿತರಿಸಿ, ಆಯೋಜಕರಾದ ಗಜೇಂದ್ರಗಡ ಸ್ಪೋರ್ಟ್ಸ್ ಕ್ಲಬ್‌ನ ಕ್ರೀಡಾ ಸೇವೆಯನ್ನು ಅತಿಥಿಗಳು ಮುಕ್ತಕಂಠದಿಂದ ಪ್ರಶಂಸಿಸಿದರು.

# ರೈತರು ಆಧ್ಯಾತ್ಮಿಕ ಜೀವಿಗಳಾಗಬೇಕು



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ರೈತರು ಕೇವಲ ಹೊಲದಲ್ಲಿ ದುಡಿಯುವ ವ್ಯಕ್ತಿಗಳಾಗಬಾರದು. ಅವರು ಖುಷಿಯಿಂದ ಕೃಷಿ ಮಾಡಬೇಕೆಂದರೆ ಅವರು ಆಧ್ಯಾತ್ಮಿಕ ಜೀವಿಗಳಾಗಬೇಕು. ಅದಕ್ಕಾಗಿ ಅವರು ಕೆಲವಷ್ಟು ಸಮಯವನ್ನಾದರೂ ಆಧ್ಯಾತ್ಮಿಕದಲ್ಲಿ ಕಳೆಯಬೇಕೆಂದು ಬ್ರಹ್ಮಕುಮಾರಿ ಸವಿತಕ್ಕ ಹೇಳಿದರು.

ಪಟ್ಟಣದ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಏರ್ಪಡಿಸಿದ್ದ ರೈತ ದಿನಾಚರಣೆಯಲ್ಲಿ ರೈತರನ್ನು ಸನ್ಮಾನಿಸಿ ಅವರು ಮಾತನಾಡಿದರು.

ರೈತ ಖುಷಿಯಿಂದ ಕೃಷಿ ಮಾಡಿದರೆ ಅವನ ಕೈಯಲ್ಲಿನ ಅನ್ನ ಉಣ್ಣುವ ಜನರೂ ಖುಷಿಯಾಗಿರುತ್ತಾರೆ. ಜನತೆ ಖುಷಿಯಾಗಿದ್ದರೆ ಇಡೀ ಜಗತ್ತೇ ಖುಷಿಯಾಗಿರುತ್ತದೆ. ಈಶ್ವರೀಯ ವಿಶ್ವ ವಿದ್ಯಾಲಯದ ಕನಸು ಮತ್ತು ಆಸೆ ಅದೇ ಆಗಿದೆ. ರೈತರು ದೈಹಿಕವಾಗಿ ಮತ್ತು ಮಾನಸಿಕವಾಗಿ ಎಂದಿಗೂ ಸದೃಢರಾಗಿರಬೇಕು. ಅವರಲ್ಲಿ ಈ ಸದೃಢತೆ ಧ್ಯಾನ ಮತ್ತು ಯೋಗದಿಂದ ಬರುತ್ತದೆ. ಆದ್ದರಿಂದ ನೀವುಗಳು ನಿತ್ಯವೂ ಧ್ಯಾನ ಮಾಡುವುದನ್ನು ರೂಢಿಸಿಕೊಳ್ಳಬೇಕು. ಇದರಿಂದ ಜೀವನದಲ್ಲಿ ಏನೇ ಏರು-ಪೇರುಗಳು ಬಂದರೂ ಅವುಗಳನ್ನು ಧೈರ್ಯದಿಂದ ಎದುರಿಸಲು ನೀವು ಸಮರ್ಥರಾಗುತ್ತೀರಿ ಎಂದು ಹೇಳಿದರು. ರೈತ ಸೇನಾದ ಅಧ್ಯಕ್ಷ ಆನಂದ ಕೊಟಗಿ ಮಾತನಾಡಿ, ದಿವಂಗತ ಪ್ರಧಾನಿ ಚೌಧರಿ ಚರಣಸಿಂಗ್ ಅವರ ಜನ್ಮದಿನವಾದ ಡಿ. 23ರನ್ನು ರಾಷ್ಟ್ರೀಯ ರೈತ ದಿನವಾಗಿ ಆಚರಿಸಲಾಗುತ್ತಿದೆ. ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ರೈತ ದಿನಾಚರಣೆಯನ್ನು ಆಚರಿಸುತ್ತಿರುವುದು ನಮಗೆ ವಿಶೇಷವಾದ ಆನಂದವನ್ನುಂಟು ಮಾಡಿದೆ. ಈ ಸಮಯದಲ್ಲಿ ಕೇಳುವ ಆಧ್ಯಾತ್ಮಿಕ ವಿಚಾರಗಳು ನಮ್ಮಲ್ಲಿ ಸ್ಥೈರ್ಯ ತುಂಬುತ್ತವೆ ಎಂದರು.


ರೈತ ಮುಖಂಡರಾದ ಶರಣಪ್ಪ ಧರ್ಮಾಯತ, ರುದ್ರೇಶ ಕೊಟಗಿ, ಚಂದ್ರು ಹೊನವಾಡ, ಕಳಕಪ್ಪ ರೋಣದ, ಶರಣಪ್ಪ ಹಕ್ಕಿ, ಅರುಣ ಧರ್ಮಾಯತ, ಮಲ್ಲನಗೌಡ ಪಾಟೀಲ, ಫಕೀರಪ್ಪ ಧರ್ಮಾಯತ, ಕಲ್ಲಪ್ಪ ಗಂಗರಗೊಂಡ, ಬಸವರಾಜ ಸೋಮಗೊಂಡ, ಗುರುಪಾದಪ್ಪ ಬೆಲ್ಲದ, ಸುಭಾಸ ಧರ್ಮಾಯತ ಇನ್ನಿತರರಿದ್ದರು.

### ಪುತ್ತೂರಿನಲ್ಲಿ ಪುಸ್ತಕ ಲೋಕಾರ್ಪಣೆ, ಬಹುಭಾಷಾ ಕವಿಗೋಷ್ಠಿ ನಾಳೆ

# 'ನಿರಂತರ ಸಾಹಿತ್ಯ ಪುರಸ್ಕಾರ' ಪ್ರದಾನ

■ವಿಜಯಸಾಕ್ಷಿ ಸುದ್ದಿ, ಪುತ್ತೂರು

ಇಲ್ಲಿಯ ಸಂತ ಫಿಲೋಮಿನಾ ಜ್ಯೂಬಿಲಿ ಮೆಮೋರಿಯಲ್ ಹಾಲ್ ದರ್ಬೆಯಲ್ಲಿ ಡಿ. 28ರಂದು ಬೆಳಿಗ್ಗೆ 9.30ಕ್ಕೆ ನಿರಂತರ ಪ್ರಕಾಶನ ಗದಗ, ಮಕಾನದಾರ ಸಾಹಿತ್ಯ ಪ್ರತಿಷ್ಠಾನ ಗಜೇಂದ್ರಗಡ ಹಾಗೂ ಪುತ್ತೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಇವರ ಸಹಯೋಗದಲ್ಲಿ ನಿರಂತರ ಸಾಹಿತ್ಯ ಪುರಸ್ಕಾರ ಪ್ರದಾನ, ಪುಸ್ತಕ ಲೋಕಾರ್ಪಣೆ ಹಾಗೂ ಬಹುಭಾಷಾ ಕವಿಗೋಷ್ಠಿ ಸಮಾರಂಭ ಜರುಗಲಿದೆ.




ಕಾರ್ಯಕ್ರಮದ ಉದ್ಘಾಟಕರಾಗಿ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಫರೀದ ಆಗಮಿಸುವರು. ಪುತ್ತೂರು ಮಾಯ್‌ದೆ ದೇವುಸ್ ಚರ್ಚ್‌ನ ಧರ್ಮಗುರುಗಳಾದ ವಂ. ಫಾದರ್ ಲಾರೆನ್ಸ್ ಮಸ್ಕರೇನ್ಹಸ್ ಅವರು ಆಗಮಿಸಲಿದ್ದಾರೆ. ಹಿರಿಯ ಬಹುಭಾಷಾ ಕವಿ, ಚಲನಚಿತ್ರ ನಟರಾದ ಮುಹಮ್ಮದ್ ಬಡ್ಡೂರು ಅವರು ಫ್ಲಾವಿಯಾ ಅಲ್ಬುಕರ್ಕ ಅವರ 'ಸಖಿ ಸೂಸಿದ ಸೌಗಂಧ' ಚುಟುಕು ಸಂಕಲನ ಲೋಕಾರ್ಪಣೆ ಮಾಡಲಿದ್ದಾರೆ. ಕೃತಿಕಾರರ ಪರಿಚಯವನ್ನು ಕುಮುದಾಕ್ಷಿ ವಿ, ಕೃತಿ ಪರಿಚಯವನ್ನು ಶಿವಮೊಗ್ಗ ಕುವೆಂಪು ವಿಶ್ವ ವಿದ್ಯಾಲಯದ ಡಾ. ಹಸೀನಾ ಎಚ್.ಖಾದ್ರಿ ಮಾಡಲಿದ್ದು, ಪುರಸ್ಕಾರದ ಕುರಿತು ಹಿರಿಯ ಗಜಲ್ ಕವಯತ್ರಿ ಡಾ. ರೇಣುಕಾತಾಯಿ ಎಂ.ಸಂತಬಾ ಮತನಾಡಲಿದ್ದಾರೆ.

ಪುತ್ತೂರಿನ ಫ್ಲಾವಿಯಾ ಅಲ್ಬುಕರ್ಕ್ ಅವರು ನಿರಂತರ ಸಾಹಿತ್ಯ ಪುರಸ್ಕಾರ ಸ್ವೀಕರಿಸಲಿದ್ದಾರೆ. ಪುತ್ತೂರು ವಿಧಾನ ಸಭಾ ಕ್ಷೇತ್ರದ ಶಾಸಕ ಅಶೋಕ್ ಕುಮಾರ್ ರೈ ಪುರಸ್ಕಾರ ಪ್ರದಾನ ಮಾಡಲಿದ್ದಾರೆ. ಹಿರಿಯ ಲೇಖಕ, ವಕೀಲರಾದ ಬಿ.ಪುರಂದರ ಭಟ್ ಅವರಿಂದ ಆಶಯ ಭಾಷಣ, ಪವಿತ್ರಾತ್ಮರ ಇಗರ್ಜಿ ಮುಕ್ಕ ಧರ್ಮಗುರುಗಳಾದ ವಂ. ಸ್ಟ್ಯಾನಿ ಪಿಂಟೋ ಇವರಿಂದ ಶುಭನುಡಿ ನೆರವೇರಲಿದೆ. ಗದಗ ನ್ಯಾಯಾಂಗ ಇಲಾಖೆಯ ನಿವೃತ್ತ ಅಧಿಕಾರಿ ಹಾಗೂ ನಿರಂತರ ಪ್ರಕಾಶನದ ಪ್ರಕಾಶಕ ಎ.ಎಸ್. ಮಕಾನದಾರ ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ಬಹುಭಾಷಾ ಕವಿಗೋಷ್ಠಿ ಮತ್ತು ಚುಟುಕು ಕವಿಗೋಷ್ಠಿ ಕಾರ್ಯಕ್ರಮಗಳು ನೆರವೇರಲಿದ್ದು, ಕನ್ನಡ, ತುಳು, ಹಿಂದಿ, ಬ್ಯಾರಿ, ಮರಾಠಿ, ಕೊಂಕಣಿ ಸೇರಿದಂತೆ ವಿವಿಧ ಭಾಷೆಗಳ ಜೊತೆಗೆ ಪಟ್ಟೇಗಾರ ಭಾಷೆಯಲ್ಲಿ ಗದುಗಿನ ಗಣೇಶ ಪವಾರ, ಕೊಂಕಣಿ ಭಾಷೆಯಲ್ಲಿ ಪುತ್ತೂರಿನ ಫ್ಲಾವಿಯಾ ಅಲ್ಬುಕರ್ಕ್ ಸೇರಿದಂತೆ ರಾಜ್ಯದ ಅನೇಕ ಸಾಹಿತಿಗಳಿಂದ ಬಹುಭಾಷಾ ಕವಿಗೋಷ್ಠಿ ಜರುಗಲಿದೆ. ಆಸಕ್ತರೆಲ್ಲರೂ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಮಕಾನದಾರ ಸಾಹಿತ್ಯ ಪ್ರತಿಷ್ಠಾನದ ಸಂಚಾಲಕ, ಕವಿ ಎಂ.ಎಸ್. ಮಕಾನದಾರ ಪತ್ರಿಕಾ ಪ್ರಕಟಣೆ ಮೂಲಕ ಕೋರಿದ್ದಾರೆ.

# ಸೈಬರ್ ಅಪರಾಧಗಳ ಕುರಿತು ಎಚ್ಚರವಾಗಿರಿ




■ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಜಗದ್ಗುರು ತ್ೋಂಟದಾಂರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದ 2025-2026ನೇ ಸಾಲಿನ ಎನ್‌ಎಸ್‌ಎಸ್ ಘಟಕದ ವಾರ್ಷಿಕ ವಿಶೇಷ ಶಿಬಿರವನ್ನು ದತ್ತು ಗ್ರಾಮ ಹಾತಲಗೇರಿಯಲ್ಲಿ ಹಮ್ಮಿಕೊಳ್ಳಲಾಗಿತ್ತು.

ಶಿಬಿರದ 5ನೇ ದಿನದ ಕಾಂರ್ಯಕ್ರವ್ಂವ್ನ್ನ್ ಧ್ವಜಾರೋಹಣದೊಂದಿಗೆ ಪ್ರಾರಂಭಿಸಲಾಯಿತು. ಸಾಯಂಕಾಲ ಗದುಗಿನ ಸೈಬರ್ ಕ್ರೈಂ ವಿಭಾಗದ ಶಿವಾನಂದ ಪಮ್ಮಾರ ಮತ್ತು ಎಸ್.ಜಿ. ಹರ್ಲಾಪೂರ ಮುಖ್ಯ ಅತಿಥಿಗಳಾಗಿ ಭಗವಹಿಸಿ ಸೈಬರ್ ಕ್ರೈಂ ವಿಷಯದ ಕುರಿತು ಉಪನ್ಯಾಸ ನೀಡಿ, ಆಧುನಿಕ ಯುಗದಲ್ಲಿ ಮೊಬೈಲ್ ಕರೆಗಳ ಮೂಲಕ ಬ್ಯಾಂಕಿನ ಖಾತೆಗಳನ್ನು ಹ್ಯಾಕ್ ಮಾಡಿ ಹಣಕಾಸು ವರ್ಗಾವಣೆ ಮಾಡಿಕೊಂಡು ಮೋಸ ಮಾಡುತ್ತಿರುವ ಅಪಾರಾಧಿ ಕೃತ್ಯಗಳ ಮಾಹಿತಿ ನೀಡಿದರಲ್ಲದೆ, ಎಲ್ಲರೂ ಇಂತಹ ಕೃತ್ಯಗಳ ಬಗ್ಗೆ ಮುನ್ನಚ್ಚರಿಕೆ ವಹಿಸಬೇಕೆಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಎಸ್‌ಡಿಎಂಸಿ ಮಾಜಿ ಅಧ್ಯಕ್ಷ ಕುಬೇರಪ್ಪ ಅಸುಂಡಿ ಮಾತನಾಡಿ, ಈ ಶಿಬಿರದ ಅಡಿಯಲ್ಲಿ ಇಂತಹ ಕಾಂರ್ಯವ್ರ್ವ್ಂಗಳನ್ನ್ ಹಮ್ಮಿಕೊಂಡು ಜನರನ್ನು ಜಾಗೃತಗೊಳಿಸುತ್ತಿರುವುದು ಸಂತೋಷದ ಸಂಗತಿ. ಎಲ್ಲರೂ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು.

ಗ್ರಾಮದ ಹಿರಿಯ ಮುಖಂಡರಾದ ವೆಂಕಪ್ಪ ಮೇಲ್ಮನಿ, ಬಸಪ್ಪ ಹೂವನ್ನವರ, ಸತ್ಯಪ್ಪ ಕೊಪ್ಪಳ, ಯುವ ಮುಖಂಡರಾದ ಸತೀಶ ಕಡೆಮನಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಸಮಾರಂಭದಲ್ಲಿ ಹಾತಲಗೇರಿಯ ಜಾನಪದ ಕಲಾವಿದ ಸತ್ಯಪ್ಪ ಸಣ್ಣೇರಿ ಗೀಗಿ ಪದ ಹಾಡಿ ಎಲ್ಲರನ್ನು ರಂಜಿಸಿದರು.

ಆರ್.ಎಸ್. ಹಿರೇಮಠ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಪ್ರಾಥಮಿಕ ಮತ್ತು ಪ್ರೌಢಶಾಲೆಯ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ನಾಗೇಶ ತಾಳಿ ಕಾರ್ಯಕ್ರಮ ನಿರೂಪಿಸಿದರು. ಎನ್‌ಎಸ್‌ಎಸ್ ಅಧಿಕಾರಿಗಳಾದ ಪ್ರೊ. ಎಂ.ಬಿ. ಶಿರುಂದ ವಂದಿಸಿದರು.

# ಸರ್ವರಿಗೂ ಲೇಸನ್ನೇ ಬಯಸಿದವರು ಏಸು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಜೀವನದಲ್ಲಿ ತಾನು ಏನೆಲ್ಲ ತೊಂದರೆ ಎದುರಿಸಿದರೂ ಸರ್ವರಿಗೂ ಲೇಸನ್ನೇ ಬಯಸಿದವರು ಏಸುಕ್ರಿಸ್ತರು. ಅವರ ಜನ್ಮ ದಿನವಾದ ಇಂದು ಈ ಲೋಕದ ಎಲ್ಲ ಜನತೆಗೆ ಇನ್ನಷ್ಟು ಶಾಂತಿ, ನೆಮ್ಮದಿ ನೀಡೆಂದು ಅವರಲ್ಲಿ ಪ್ರಾರ್ಥಿಸೋಣ ಎಂದು ಡಾ. ಡ್ಯಾನಿಯಲ್ ಹೇಳಿದರು.

ಪಟ್ಟಣದ ಜಕ್ಕಲಿ ರಸ್ತೆಯಲ್ಲಿರುವ ವಿನ್ಸೆಂಟ್ ಮೆಮೋರಿಯಲ್ ಚರ್ಚ್‌ನಲ್ಲಿ ಆಚರಿಸಲಾದ ಕ್ರಿಸ್‌ಮಸ್ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಏಸುವಿನ ಸಂದೇಶವು ಸರ್ವರ ಏಳಿಗೆಗಾಗಿ ಇದೆ. ಮಾನವ ಕಲ್ಯಾಣವನ್ನು ತನ್ನ ಜೀವನದ ಗುರಿಯನ್ನಾಗಿಸಿಕೊಂಡಿದ್ದ ಏಸು, ಮಾನವರಲ್ಲಿನ ಸಣ್ಣತನದ ಗುಣಗಳನ್ನು ಕಳೆಯಲು ಇನ್ನಿಲ್ಲದ ಪ್ರಯತ್ನ ಮಾಡಿದ್ದಾರೆ. ಬಾಳು, ಇತರರನ್ನು ಬಾಳಲು ಬಿಡು ಎಂಬುದು ಏಸುವಿನ ಮಹತ್ವದ ಸಂದೇಶಗಳಲ್ಲಿ ಒಂದಾಗಿದೆ. ಇದನ್ನು ಅರಿತು ನಾವೆಲ್ಲರೂ ನಡೆದರೆ ನಮ್ಮ ಬಾಳು ಬಂಗಾರವಾಗುತ್ತದೆ. ಯಾರನ್ನೂ ದ್ವೇಷಿಸದೆ, ಎಲ್ಲರೊಂದಿಗೆ ಪ್ರೀತಿ, ಸೌಹಾರ್ದತೆಯಿಂದ ಬದುಕಿದ್ದೇ ಆದರೆ ಎಲ್ಲರ ಜೀವನವೂ ಪವಿತ್ರ ಜೀವನವಾಗುತ್ತದೆ ಎಂದು ಹೇಳಿದರು.

ಪ್ರೀತಿ, ತ್ಯಾಗ, ಸಹನೆ ಮತ್ತು ಶಾಂತಿಯ ಪ್ರತಿರೂಪ ಏಸುವಾಗಿದ್ದಾರೆ. ಅವರ ತತ್ವಗಳನ್ನು ನಾವು ಅರ್ಥ ಮಾಡಿಕೊಂಡು ನಮ್ಮ ಜೀವನವನ್ನು ಸಾಗಿಸುವುದು ಅವಶ್ಯಕವಾಗಿದೆ. ದುಃಖದಲ್ಲಿದ್ದ ಜನರ ಮನದ ನೋವನ್ನು ಕಳೆಯಲೆಂದೇ ಏಸುವಿನ ಜನನವಾಗಿದೆ. ಇಂದು ಅವರು ಹುಟ್ಟಿದ ದಿನವನ್ನು ಆಚರಿಸುತ್ತಿರುವ ನಾವೆಲ್ಲ ಅವರನ್ನು ಸ್ತುತಿಸುವ, ಅವರ ಸಂದೇಶಗಳನ್ನು ಸಾರುವ ಬೈಬಲ್ ಓದಿ, ಅವರ ಸ್ಮರಣೆಯೊಂದಿಗೆ ಅವರನ್ನು ನೆನಸಿಕೊಂಡು ಪ್ರೀತಿಯಿಂದ ಬಾಳೋಣ ಎಂದರು.

ಈ ಸಂದರ್ಭದಲ್ಲಿ ಪಟ್ಟಣದ ಕ್ರೈಸ್ತ ಬಾಂಧವರೆಲ್ಲರೂ ಉಪಸ್ಥಿತರಿದ್ದರು.

# ವಾರ್ಷಿಕ ಸ್ನೇಹ ಸಮ್ಮೇಳನ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯ 40ನೇ ವಾರ್ಷಿಕ ಸ್ನೇಹ ಸಮ್ಮೇಳನವು ಡಿ. 27ರಂದು ಜರುಗಲಿದೆ. ಪೂರ್ವ ಪ್ರಾಥಮಿಕ ಮತ್ತು ಕಿರಿಯ ಪ್ರಾಥಮಿಕ ವಿದ್ಯಾರ್ಥಿಗಳ ಕಾರ್ಯಕ್ರಮವು ಮುಂಜಾನೆ 9.30 ಗಂಟೆಗೆ ಜರುಗುವುದು ಹಾಗೂ ಪ್ರಾಥಮಿಕ ಮತ್ತು ಪ್ರೌಢಶಾಲೆಯ ವಿದ್ಯಾರ್ಥಿಗಳ ವಾರ್ಷಿಕೋತ್ಸವವು ಸಾಯಂಕಾಲ 4.30ಕ್ಕೆ ಸಂಭಾಪೂರ ರಸ್ತೆಯಲ್ಲಿರುವ ಶಾಲಾ ಆವರಣದಲ್ಲಿ ನಡೆಯಲಿದೆ. ಮುಂಜಾನೆಯ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ವಿಮಲ್ ರೆಸಾರ್ಟ್‌ನ ಸಂಸ್ಥಾಪಕರಾದ ಭೂಷಣ ಶಹಾ ಹಾಗೂ ಸಾಯಂಕಾಲದ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಪ್ರಸಿದ್ಧ ಕ್ಯಾನ್ಸರ್ ತಜ್ಞರಾದ ಡಾ. ವಿಜಯಲಕ್ಷ್ಮಿ ದೇಶಮಾನೆ ಆಗಮಿಸಲಿದ್ದಾರೆ. ಶಾಲೆಯ ಆಡಳಿತ ಮಂಡಳಿಯ ಸದಸ್ಯರು, ಪ್ರಾಚಾರ್ಯರು ಮತ್ತು ಸಮಸ್ತ ಸಿಬ್ಬಂದಿ ವರ್ಗದವರು ಸ್ವಾಗತ ಕೋರಿದ್ದಾರೆ.

# ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ವಾ.ಕ.ರ.ಸಾ ಸಂಸ್ಥೆಯಲ್ಲಿ ಚಾಲಕ, ಚಾಲಕ (ಪಜಾ-ಹಿಂಬಾಕಿ) ಮತ್ತು ಚಾಲಕ-ಕಂ-ನಿರ್ವಾಹಕ (ಪಜಾ-ಹಿಂಬಾಕಿ) ಹುದ್ದೆಗಳಿಗೆ ಸಂಬಂಧಿಸಿದಂತೆ 14-06-2025ರಂದು ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಿ, ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಮಾಡಲಾಗಿದೆ.

ಪ್ರಸ್ತುತ, ಸರ್ಕಾರದ ಆದೇಶದನ್ವಯ ಚಾಲಕ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ಅನುಮೋದಿಸಲಾಗಿದೆ. ಅದರಂತೆ, 14-06-2025ರಂದು ಪ್ರಕಟಿಸಲಾದ ಆಯ್ಕೆಪಟ್ಟಿಯನ್ವಯ ಈಗಾಗಲೇ ಕರ್ತವ್ಯ ನಿರ್ವಹಿಸುತ್ತಿರುವ ಅಭ್ಯರ್ಥಿಗಳನ್ನೊಳಗೊಂಡಂತೆ ಒಟ್ಟು 2 ಸಾವಿರ ಹುದ್ದೆಗಳ ಪರಿಷ್ಕೃತ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಹಾಗೂ ಪ್ರವರ್ಗವಾರು ಹಾಗೂ ಶೇಕಡಾವಾರು ವಿವರಗಳನ್ನು ಸಂಸ್ಥೆಯ ಕೇಂದ್ರ ಕಛೇರಿ, ಗೋಕುಲ ರಸ್ತೆ, ಹುಬ್ಬಳ್ಳಿಯ ಸೂಚನಾ ಫಲಕದಲ್ಲಿ ಮತ್ತು ಸಂಸ್ಥೆಯ ವೆಬ್‌ಸೈಟ್ ವಿಳಾಸ "www.nwkrtc.karnataka.gov.in" ನಲ್ಲಿ ಪ್ರಕಟಿಸಲಾಗಿದೆ. ಪರಿಷ್ಕೃತ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಏನಾದರೂ ಆಕ್ಷೇಪಣೆಗಳಿದ್ದಲ್ಲಿ, ದಿನಾಂಕ 02-01-2026ರ ಒಳಗಾಗಿ ಕೇಂದ್ರ ಕಛೇರಿ, ಗೋಕುಲ ರಸ್ತೆ, ಹುಬ್ಬಳ್ಳಿ ಇಲ್ಲಿ ಖುದ್ದಾಗಿ ಅಥವಾ ಆನ್‌ಲೈನ್ ಮುಖಾಂತರ ಸಲ್ಲಿಸಬಹುದಾಗಿದೆ. ನಂತರ ಸ್ವೀಕರಿಸಲಾಗುವ ಅಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka